ಸಂಪುಟ : 11 ಸಂಚಿಕೆ: 121 ಪುಟ : 4+2 ಬೆಲೆ: 3.00 ರವಿವಾರ ಜೂನ್ 14 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 121 Pages : 4+2 Price : 3.00 Sunday june 14 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಎಚ್.ಕೆ. ಪಾಟೀಲ್ ಪರ ಮಹಿಳೆಯರ ಕಣ್ಣೀರಿನ ಮನವಿ–ಜಿ.ಎಸ್. ಪಾಟೀಲ್ ಪರ ಪಾದಯಾತ್ರೆ ಘೋಷಣೆ–ಕಾಂಗ್ರೆಸ್‌ನಲ್ಲಿ ತಾರಕ್ಕೇರಿದ ಸಚಿವ ಸ್ಥಾನದ ಜಿದ್ದಾಜಿದ್ದಿ!

# ಸಚಿವ ಸ್ಥಾನಕ್ಕೆ 'ಪಾಟೀಲ್ ವರ್ಸಸ್ ಪಾಟೀಲ್'

■ **ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸಚಿವ ಸಂಪುಟದ ಎರಡನೇ ಹಂತದ ವಿಸ್ತರಣೆ ಸಮೀಪಿಸುತ್ತಿದ್ದಂತೆ ಗದಗ ಜಿಲ್ಲೆಯಲ್ಲಿ ಸಚಿವ ಸ್ಥಾನದ ರಾಜಕೀಯ ಕದನ ತೀವ್ರ ಸ್ವರೂಪ ಪಡೆದುಕೊಂಡಿದೆ. ಮಾಜಿ ಸಚಿವ ಎಚ್.ಕೆ. ಪಾಟೀಲ್ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ್ ಪರ ಬೆಂಬಲಿಗರು ಪ್ರತ್ಯೇಕವಾಗಿ ಶಕ್ತಿ ಪ್ರದರ್ಶನ ಆರಂಭಿಸಿದ್ದು, ಕಾಂಗ್ರೆಸ್ ಹೈಕಮಾಂಡ್

**ರಾಜಕೀಯ ನಾಡಿಮಿಡಿತ**

"ಸಚಿವ ಸಂಪುಟ ವಿಸ್ತರಣೆ ಘೋಷಣೆಯಾಗುವ ಮುನ್ನವೇ ಗದಗ ಜಿಲ್ಲೆಯಲ್ಲಿ ರಾಜಕೀಯ ತಾಪಮಾನ ಏರಿದೆ. ಎಚ್.ಕೆ. ಪಾಟೀಲ್ ಅವರ ಅನುಭವಕ್ಕೆ ಮಣೆ ಹಾಕುತ್ತದೆಯೇ ಹೈಕಮಾಂಡ್? ಅಥವಾ ನಾಲ್ಕು ಬಾರಿ ಶಾಸಕರಾಗಿರುವ ಜಿ.ಎಸ್. ಪಾಟೀಲ್ ಅವರಿಗೆ ಅವಕಾಶ ನೀಡುತ್ತದೆಯೇ? ಎಂಬ ಕುತೂಹಲ ಜಿಲ್ಲೆಯ ರಾಜಕೀಯ ವಲಯದಲ್ಲಿ ಮನೆ ಮಾಡಿದೆ."




ಮೇಲೆ ಒತ್ತಡ ಹೇರುವ ಪ್ರಯತ್ನಗಳು ಜೋರಾಗಿವೆ. ಒಂದೆಡೆ ಎಚ್.ಕೆ. ಪಾಟೀಲ್ ಅವರಿಗೆ ಸಚಿವ ಸ್ಥಾನ ಹಾಗೂ ಉಪಮುಖ್ಯಮಂತ್ರಿ ಹುದ್ದೆ ನೀಡುವಂತೆ ಮಹಿಳೆಯರು ಕಣ್ಣೀರಿನ ಮನವಿ ಮಾಡಿದರೆ, ಮತ್ತೊಂದೆಡೆ ಜಿ.ಎಸ್. ಪಾಟೀಲ್ ಪರ ಕಾರ್ಯಕರ್ತರು ಬೃಹತ್ ಪಾದಯಾತ್ರೆಯ ಘೋಷಣೆ ಮಾಡುವ ಮೂಲಕ ರಾಜಕೀಯ ಕಣ ರಂಗೇರಿಸಿದ್ದಾರೆ.

ಒಂದು ಕಡೆ ಗದಗ ಕ್ಷೇತ್ರದ ಕಾಂಗ್ರೆಸ್ ಮಹಿಳಾ ಘಟಕದ ನಗರಸಭೆ ಸದಸ್ಯೆ ಶಕುಂತಲಾ ಅಕ್ಕಿ ಮತ್ತು ಕಾರ್ಯಕರ್ತೆಯರು ಎಚ್.ಕೆ. ಪಾಟೀಲ್ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಆಗ್ರಹಿಸಿ ಭಾವನಾತ್ಮಕ ಮನವಿ ಮಾಡಿದ್ದಾರೆ. ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಕೆಲ ಮಹಿಳೆಯರು ಕಣ್ಣೀರು ಹಾಕುತ್ತಾ, "ಎಚ್.ಕೆ. ಪಾಟೀಲ್ ಅವರಿಗೆ ಸಚಿವ ಸ್ಥಾನ ನೀಡಬೇಕು. ಅವರು ಮುಖ್ಯಮಂತ್ರಿ ಹುದ್ದೆ ನಿಭಾಯಿಸುವ ಸಾಮರ್ಥ್ಯವುಳ್ಳ ನಾಯಕರು" ಎಂದು ಹೈಕಮಾಂಡ್‌ಗೆ ಸಂದೇಶ ರವಾನಿಸಿದರು.

ಮೊದಲ ಹಂತದ ಸಚಿವ ಸಂಪುಟ ವಿಸ್ತರಣೆಯಲ್ಲಿ ಎಚ್.ಕೆ. ಪಾಟೀಲ್ ಅವರನ್ನು ಕೈಬಿಟ್ಟಿರುವುದು ಉತ್ತರ ಕರ್ನಾಟಕ ಭಾಗಕ್ಕೆ ಮಾಡಿದ ಅನ್ಯಾಯವಾಗಿದೆ. ಬಡವರು, ರೈತರು ಹಾಗೂ ಸಾಮಾನ್ಯ ಜನರ ಪರ ನಿರಂತರವಾಗಿ ಕೆಲಸ ಮಾಡಿದ ಅನುಭವಿ ನಾಯಕನಿಗೆ ನ್ಯಾಯ ಸಿಗಬೇಕು. ಎರಡನೇ ಹಂತದಲ್ಲಿ ಸಚಿವ ಸ್ಥಾನ ಮಾತ್ರವಲ್ಲ, ಉಪಮುಖ್ಯಮಂತ್ರಿ ಹುದ್ದೆಯನ್ನೂ ನೀಡಬೇಕು ಎಂದು ಒತ್ತಾಯಿಸಿದರು.

**ಜಿ.ಎಸ್. ಪಾಟೀಲ್ ಪರ ಶಿರಹಟ್ಟಿಯಿಂದ ಶಕ್ತಿ ಪ್ರದರ್ಶನ**

ಇನ್ನೊಂದೆಡೆ ರೋಣ ಶಾಸಕ ಜಿ.ಎಸ್. ಪಾಟೀಲ್ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಗದಗ ಜಿಲ್ಲೆಯ ಶಿರಹಟ್ಟಿಯ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಡಿ.ಕೆ. ಶಿವಕುಮಾರ್ ಅಭಿಮಾನಿ ಬಳಗ ಬಹಿರಂಗವಾಗಿ ಬೆಂಬಲ ವ್ಯಕ್ತಪಡಿಸಿದೆ.

ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಈರಣ್ಣ ಕೋಟಿ, 2013ರ ಚುನಾವಣೆಯಲ್ಲಿ ಗದಗ ಜಿಲ್ಲೆಯ ನಾಲ್ಕು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಜಿ.ಎಸ್. ಪಾಟೀಲ್ ಅವರ ಸಂಘಟನಾ ಶಕ್ತಿ ಪ್ರಮುಖ ಕಾರಣವಾಗಿತ್ತು.

▸▸ 3ನೇ ಪುಟಕ್ಕೆ

**ಇಬ್ಬರು ನಾಯಕರ ಪರ ಕೇಳಿ ಬಂದ ಪ್ರಮುಖ ವಾದಗಳು**

**ಎಚ್.ಕೆ.ಪಾಟೀಲ್ ಪರ**

* ಅನುಭವಿ ಹಾಗೂ ಮಾಜಿ ಸಚಿವ
* ಉತ್ತರ ಕರ್ನಾಟಕದ ಪ್ರಭಾವಿ ನಾಯಕ
* ಬಡವರ ಪರ ಕೆಲಸ ಮಾಡಿದ ಹಿನ್ನಲೆ
* ಉಪಮುಖ್ಯಮಂತ್ರಿ ಸ್ಥಾನಕ್ಕೂ ಅರ್ಹರು ಎಂಬ ಬೆಂಬಲಿಗರ ವಾದ

**ಜಿ.ಎಸ್. ಪಾಟೀಲ್ ಪರ**

* ನಾಲ್ಕು ಬಾರಿ ಶಾಸಕರಾಗಿ ಆಯ್ಕೆ
* ಪಕ್ಷ ಸಂಘಟನೆಯಲ್ಲಿ ಪ್ರಮುಖ ಪಾತ್ರ
* 2013ರಲ್ಲಿ ಜಿಲ್ಲೆಯ ನಾಲ್ಕು ಕ್ಷೇತ್ರದಲ್ಲಿ ಕಾಂಗ್ರೆಸ್ ಶಾಸಕರ ಗೆಲುವಿನ ರೂವಾರಿ ಎಂಬ ಬೆಂಬಲಿಗರ ಅಭಿಪ್ರಾಯ
* ಜೂನ್ 16ರಂದು ಬೃಹತ್ ಪಾದಯಾತ್ರೆ ಘೋಷಣೆ

## ಡಿಎಸ್‌ಎಸ್ ತಾಲೂಕು ಸಂಚಾಲಕರಾಗಿ ಸದಾನಂದ ನಂದೆಣ್ಣವರ ನೇಮಕ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿಸಿರುವ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಲಕ್ಷ್ಮೇಶ್ವರ ತಾಲೂಕು ಸಂಚಾಲಕರಾಗಿ ಸದಾನಂದ ನಂದೆಣ್ಣವರ ಅವರನ್ನು ನೇಮಕ ಮಾಡಲಾಗಿದೆ.

ಶನಿವಾರ ಗದಗದಲ್ಲಿ ರಾಜ್ಯ ಸಂಘಟನೆಯ ವತಿಯಿಂದ ನಡೆದ ಪದಾಧಿಕಾರಿಗಳ ಸಭೆಯಲ್ಲಿ ಗದಗ ಜಿಲ್ಲಾ ಸಂಚಾಲಕ ದುರ್ಗಪ್ಪ ಎಲ್. ಎಚ್. ಅವರು ನೇಮಕಾತಿ ಆದೇಶ ಪತ್ರ ವಿತರಿಸಿದರು.

### ಹಿರಿಯ ನಾಯಕರ ಪರ ಮಹಿಳಾ ಕಾಂಗ್ರೆಸ್ ಧ್ವನಿ; ಉಪಮುಖ್ಯಮಂತ್ರಿ ಹುದ್ದೆಗೂ ಆಗ್ರಹ

# ಎಚ್ಕೆಪಿಗೆ ಸಚಿವ ಸ್ಥಾನ ಕೊಡದಿದ್ದರೆ ಉತ್ತರ ಕರ್ನಾಟಕಕ್ಕೆ ಅನ್ಯಾಯ

■ **ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಹಿರಿಯ ಹಾಗೂ ಅನುಭವಿ ರಾಜಕಾರಣಿ ಎಚ್.ಕೆ. ಪಾಟೀಲ ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡಲೇಬೇಕು. ಅವರನ್ನು ಸಚಿವ ಸಂಪುಟದಿಂದ ಹೊರಗಿಡುವುದು ಉತ್ತರ ಕರ್ನಾಟಕ ಭಾಗಕ್ಕೆ ಮಾಡಿದ ಅನ್ಯಾಯವಾಗಿದೆ ಎಂದು ಗದಗ–ಬೆಟಗೇರಿ ಶಹರ ಮಹಿಳಾ ಕಾಂಗ್ರೆಸ್ ಹೇಳಿದೆ.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಗದಗ–ಬೆಟಗೇರಿ ಶಹರ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಶಕುಂತಲಾ ಅಕ್ಕಿ, ಮುಖ್ಯಮಂತ್ರಿ ಸ್ಥಾನ ನಿಭಾಯಿಸುವ ಸಾಮರ್ಥ್ಯ ಹೊಂದಿರುವ ಎಚ್.ಕೆ. ಪಾಟೀಲ ಅವರಿಗೆ ಮೊದಲ ಹಂತದ ಸಚಿವ ಸಂಪುಟದಲ್ಲಿಯೇ ಸ್ಥಾನ ಸಿಗಬೇಕಿತ್ತು. ಆದರೆ ಅವರನ್ನು ಕಡೆಗಣಿಸಲಾಗಿದೆ. ಎರಡನೇ ಹಂತದ ಸಚಿವ ಸಂಪುಟ ವಿಸ್ತರಣೆಯಲ್ಲಿ ಅವರಿಗೆ ಸಚಿವ




ಸ್ಥಾನ ನೀಡುವ ಮೂಲಕ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಎಚ್.ಕೆ. ಪಾಟೀಲ ಅವರು ದಿಟ್ಟ, ಪ್ರಾಮಾಣಿಕ, ಕಳಂಕರಹಿತ ಹಾಗೂ ರಾಜ್ಯದ ಹಿರಿಯ ನಾಯಕರಾಗಿದ್ದು, ಪಕ್ಷದ ಸಂಘಟನೆ ಮತ್ತು ಆಡಳಿತ ಕ್ಷೇತ್ರದಲ್ಲಿ ಅಪಾರ ಅನುಭವ ಹೊಂದಿದ್ದಾರೆ. ಇಂತಹ ನಾಯಕರನ್ನು ಸಂಪುಟದಿಂದ ಹೊರಗಿಡುವುದು ಕಾಂಗ್ರೆಸ್ ಕಾರ್ಯಕರ್ತರಿಗೂ ನಿರಾಸೆ ಮೂಡಿಸಿದೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮಾಜಿ ಉಪಾಧ್ಯಕ್ಷೆ ಶಕುಂತಲಾ ಮೂಲಿಮನಿ ಮಾತನಾಡಿ, ಗದಗ ಜಿಲ್ಲೆ ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಪರಿಚಯಿಸುವ ಮೂಲಕ ಎಚ್. ಕೆ. ಪಾಟೀಲ ಅವರು ಜನಪರ ಆಡಳಿತದ ಮಾದರಿ ನಿರ್ಮಿಸಿದ್ದಾರೆ. ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯ ಸ್ಥಾಪನೆ ಸೇರಿದಂತೆ ಅನೇಕ ಮಹತ್ವದ ಯೋಜನೆಗಳನ್ನು ಜಾರಿಗೊಳಿಸಿರುವ ಅವರು ಸಚಿವ ಸ್ಥಾನಕ್ಕೆ ಸಂಪೂರ್ಣ ಅರ್ಹರು ಎಂದು ಹೇಳಿದರು.

ರಾಜ್ಯದ ಅಭಿವೃದ್ಧಿಗೆ ಅವರ ಅನುಭವ ಮತ್ತು ದೂರದೃಷ್ಟಿಯ ನಾಯಕತ್ವ ಅಗತ್ಯವಿದೆ. ಹೀಗಾಗಿ ಸಚಿವ ಸ್ಥಾನ ಮಾತ್ರವಲ್ಲದೆ ಉಪಮುಖ್ಯಮಂತ್ರಿ ಹುದ್ದೆಯನ್ನೂ ನೀಡುವ ಮೂಲಕ ಗೌರವಿಸಬೇಕು ಎಂದು ಅವರು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ದ್ರಾಕ್ಷಾಯಿಣಿ ಹಾಸಿಲಕರ, ಮೀನಾಕ್ಷಿ ಬೆನಕಣ್ಣವರ, ವೀಣಾ ಕಟ್ನಳ್ಳಿ, ಲಕ್ಷ್ಮೀ ಸಿದ್ದಮನಹಳ್ಳಿ, ಮುಸ್ಕಾನ್ ಸಯ್ಯದ್, ಯಲ್ಲಮ್ಮ ಜಡಿ, ರುದ್ರಮ್ಮ ಕೆರಕಲಮಟ್ಟಿ, ಲತಾ ಗೊಳಗೊಳಕಿ, ವಾಣಿ ಹಿರೇಮಠ ಸೇರಿದಂತೆ ಮಹಿಳಾ ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

### ಕುಮಾರಸ್ವಾಮಿ ಹೇಳಿಕೆಗೆ ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ತೀವ್ರ ಆಕ್ಷೇಪ

# ಅಜ್ಜಯ್ಯನವರ ಹೆಸರನ್ನು ರಾಜಕೀಯಕ್ಕೆ ಬಳಸಬೇಡಿ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಲಿಂ. ವೀರಗಂಗಾಧರ ಜಗದ್ಗುರುಗಳ (ಅಜ್ಜಯ್ಯ) ಹೆಸರನ್ನು ಪ್ರಸ್ತಾಪಿಸಿ ವ್ಯಂಗ್ಯವಾಗಿ ಮಾತನಾಡಿರುವುದನ್ನು ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ತೀವ್ರವಾಗಿ ಖಂಡಿಸಿದ್ದಾರೆ.

ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, "ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ" ಎಂಬ ವಿಶ್ವಮಾನವ ಸಂದೇಶ ಸಾರಿದ ಶ್ರೇಷ್ಠ ಜಗದ್ಗುರುಗಳಾದ ಅಜ್ಜಯ್ಯನವರ ತಪೋಬಲ, ವ್ಯಕ್ತಿತ್ವ ಮತ್ತು ಸಮಾಜಮುಖಿ ಸೇವೆಯ ಬಗ್ಗೆ ತಿಳಿದುಕೊಂಡು ಮಾತನಾಡಬೇಕು ಎಂದು ಕುಮಾರಸ್ವಾಮಿ ಅವರಿಗೆ ಸಲಹೆ ನೀಡಿದರು.

ಬಿಡದಿ ಟೌನ್‌ಶಿಪ್ ಕುರಿತ ಸುದ್ದಿಗೋಷ್ಠಿಯಲ್ಲಿ "ರೈತರನ್ನು ಒಕ್ಕಲೆಬ್ಬಿಸಿ ಎಂದು ಅಜ್ಜಯ್ಯ ಹೇಳಿದ್ದಾರಾ?" ಎಂದು



ಪ್ರಶ್ನಿಸಿರುವುದು ದೇಶದಾದ್ಯಂತ ಇರುವ ಲಕ್ಷಾಂತರ ಭಕ್ತರ ಭಾವನೆಗಳಿಗೆ ನೋವುಂಟು ಮಾಡಿದೆ ಎಂದು ಅವರು ಆರೋಪಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ವಿರುದ್ಧ ಇರುವ ರಾಜಕೀಯ ಭಿನ್ನಾಭಿಪ್ರಾಯಕ್ಕಾಗಿ ದೇವರ ಸ್ವರೂಪದಲ್ಲಿ ಪೂಜಿಸಲ್ಪಡುವ ಮಹನೀಯರ ಹೆಸರನ್ನು ಎಳೆದು ತರುವುದು ಸರಿಯಲ್ಲ. ಸ್ವತಃ ಕೃಷಿ ಮಾಡಿ, ಸಕಲ ಜೀವಿಗಳ ಕಲ್ಯಾಣಕ್ಕಾಗಿ ಜೀವನವನ್ನೇ ಮುಡಿಪಾಗಿಟ್ಟಿದ್ದ ಅಜ್ಜಯ್ಯನವರ ಹೆಸರನ್ನು ರಾಜಕೀಯ ಚರ್ಚೆಗೆ ಬಳಸುವುದು ಖಂಡನೀಯ ಎಂದು ಹೇಳಿದರು.

ರಾಜಕೀಯ ಲಾಭಕ್ಕಾಗಿ ಮಹನೀಯರ ಹೆಸರು ಬಳಸುವ ಪ್ರವೃತ್ತಿಯನ್ನು ಕೈಬಿಡಬೇಕು. ಇಂತಹ ಹೇಳಿಕೆಗಳು ಭಕ್ತರ ಭಾವನೆಗಳಿಗೆ ಧಕ್ಕೆ ತರುವುದಲ್ಲದೆ, ರಾಜಕೀಯವಾಗಿಯೂ ಹಿನ್ನಡೆ ಉಂಟುಮಾಡಬಹುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಅಜ್ಜಯ್ಯನವರ ಭಕ್ತರಾದ ಚಂಬಣ್ಣ ಬಾಳಿಕಾಯಿ, ಆನಂದ ಮೆಕ್ಕಿ, ಕುಬೇರಪ್ಪ ಮಹಾಂತಶೆಟ್ಟರ, ರುದ್ರಮುನಿ ಘಂಟಾಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

"ಮುಖ್ಯಮಂತ್ರಿಗಳ ವಿರುದ್ಧದ ರಾಜಕೀಯ ಭಿನ್ನಾಭಿಪ್ರಾಯಕ್ಕೆ ಅಜ್ಜಯ್ಯನವರಂತಹ ಮಹನೀಯರ ಹೆಸರನ್ನು ಬಳಸಬಾರದು. ಅವರ ಹೆಸರನ್ನು ವ್ಯಂಗ್ಯವಾಗಿ ಪ್ರಸ್ತಾಪಿಸಿರುವುದು ಭಕ್ತರ ಭಾವನೆಗಳಿಗೆ ನೋವುಂಟು ಮಾಡಿದೆ."
**– ಜಿ.ಎಂ. ಮಹಾಂತಶೆಟ್ಟರ, ಮಾಜಿ ಶಾಸಕ**

### ಗೃಹಲಕ್ಷ್ಮಿ ಹಣದಲ್ಲಿ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನೆರವಾಗಿರಿ; ದುಂದು ವೆಚ್ಚದ ಮದುವೆಗಳಿಗೆ ಕಡಿವಾಣ ಹಾಕಿ: ಡಿ.ಆರ್. ಪಾಟೀಲ್

# ಮಹಿಳಾ ಸಬಲೀಕರಣವೇ ಗ್ರಾಮ ಸ್ವರಾಜ್ಯದ ಬುನಾದಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮ ಸ್ವರಾಜ್ಯದ ಪರಿಕಲ್ಪನೆ ಸಾಕಾರಗೊಳ್ಳಬೇಕಾದರೆ ಮಹಿಳೆಯರು ಆರ್ಥಿಕವಾಗಿ ಸಬಲರಾಗಿ ಗ್ರಾಮ ಪಂಚಾಯಿತಿ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಮಾಜಿ ಶಾಸಕರು ಹಾಗೂ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ರಾಜ್ಯ ಉಪಾಧ್ಯಕ್ಷ ಡಿ.ಆರ್. ಪಾಟೀಲ್



"ಗ್ರಾಮಗಳ ಅಭಿವೃದ್ಧಿಗೆ ಮಹಿಳೆಯರ ಭಾಗವಹಿಸುವಿಕೆ ಅತ್ಯಗತ್ಯ. ಮಹಿಳಾ ಸಬಲೀಕರಣವೇ ಗ್ರಾಮ ಸ್ವರಾಜ್ಯದ ನಿಜವಾದ ಶಕ್ತಿ."
**– ಡಿ.ಆರ್. ಪಾಟೀಲ್, ಮಾಜಿ ಶಾಸಕ**

ಹೇಳಿದರು.

▸▸ 4ನೇ ಪುಟಕ್ಕೆ

### ರೋಣ ತಾಲೂಕಿಗೆ ಅನ್ಯಾಯ ಬೇಡ

# ನಿಷ್ಠಾವಂತ ನಾಯಕನಿಗೆ ನ್ಯಾಯ ನೀಡಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ರೋಣ ಶಾಸಕ ಜಿ.ಎಸ್. ಪಾಟೀಲ ಅವರು ಕಾಂಗ್ರೆಸ್ ಪಕ್ಷದ ಸಂಘಟನೆಗೆ ಸಾಕಷ್ಟು ಶ್ರಮಿಸಿದ್ದು, ರೋಣ ತಾಲೂಕಿಗೆ ಅನ್ಯಾಯ ಮಾಡದೆ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು ಎಂದು ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ಮುಖಂಡರಾದ ಮಹಮ್ಮದ್ ಯೂಸುಫ್ ಇಟಗಿ ಆಗ್ರಹಿಸಿದರು. ನಗರದಲ್ಲಿ ಶನಿವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ



▸▸ 3ನೇ ಪುಟಕ್ಕೆ

"ಜಿ.ಎಸ್. ಪಾಟೀಲ ಅವರು ಕಾಂಗ್ರೆಸ್ ಸಂಘಟನೆಗಾಗಿ ನಿರಂತರವಾಗಿ ಶ್ರಮಿಸಿದ್ದಾರೆ. ರೋಣ ತಾಲ್ಲೂಕಿಗೆ ನ್ಯಾಯ ದೊರಕಬೇಕಾದರೆ ಅವರಿಗೆ ಸಚಿವ ಸ್ಥಾನ ನೀಡಬೇಕು."
**– ಈರಣ್ಣ ಕೋಟಿ, ಕಾಂಗ್ರೆಸ್ ಪಕ್ಷದ ಮುಖಂಡ**

## ನಾಳೆ ಯೋಗ ಅರಿವು-ಆಚಾರ ಶಿಬಿರಕ್ಕೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಗದಗ ಜಿಲ್ಲಾ ಮಟ್ಟದ ಯೋಗ ಸಾಂಘಿಕ ಕಾರ್ಯಕ್ರಮಗಳಡಿ ಯೋಗ ಅರಿವು-ಆಚಾರ ಶಿಬಿರದ ಉದ್ಘಾಟನಾ ಸಮಾರಂಭ ಜೂನ್ 15ರಂದು ಬೆಳಿಗ್ಗೆ 6.30ಕ್ಕೆ ನಗರದ ಪೂಜ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಶಿವಾನುಭವ ಮಂಟಪದಲ್ಲಿ ನಡೆಯಲಿದೆ.

ಎಸ್.ವೈ.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ, ಲಿಂಗಾಯತ ಪ್ರಗತಿಶೀಲ ಸಂಘ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಹಾಗೂ ಗದಗ ಜಿಲ್ಲಾ ಯೋಗ ಒಕ್ಕೂಟ (ರಿ) ಇವರ ಸಹಯೋಗದಲ್ಲಿ ಶಿಬಿರವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಡಾ. ಉಮೇಶ ವಿ. ಪುರದ ವಹಿಸಲಿದ್ದು, ಸಮಾಜ ಸೇವಾಸಕ್ತೆ ಹಾಗೂ ವಕೀಲೆ ಶ್ರೀಮತಿ ಶ್ರೀದೇವಿ ಶೆಟ್ಟರ ಶಿಬಿರ ಉದ್ಘಾಟಿಸಲಿದ್ದಾರೆ. ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ. ಬಳಿಗೇರ ಹಾಗೂ ಶ್ರೀ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ಜಯಶ್ರೀ ಉಗಲಾಟದ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಶಿಬಿರವು ಜೂನ್ 15ರಿಂದ 21ರವರೆಗೆ ಪ್ರತಿದಿನ ಬೆಳಿಗ್ಗೆ 6.30ರಿಂದ 7.30ರವರೆಗೆ ನಡೆಯಲಿದ್ದು, 12 ವರ್ಷ ಮೇಲ್ಪಟ್ಟ ಮಹಿಳೆಯರು ಮತ್ತು ಪುರುಷರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಶಿಬಿರ ಸಂಯೋಜಕ ಹಾಗೂ ಯೋಗಾಚಾರ್ಯ ಕೆ.ಎಸ್. ಪಲ್ಲೇದ ಮನವಿ ಮಾಡಿದ್ದಾರೆ.

## ಇಂದು ಬಸವದಳದಿಂದ ವಿಶೇಷ ಉಪನ್ಯಾಸ

■ವಿಜಯಸಾಕ್ಷಿ ಸುದ್ದಿ, ಗದಗ

ಬಸವದಳ ಗದಗ-ಬೆಟಗೇರಿ ವತಿಯಿಂದ ಆಯೋಜಿಸಲಾಗುತ್ತಿರುವ 1702ನೇ ಶರಣ ಸಂಗಮ ಕಾರ್ಯಕ್ರಮದಲ್ಲಿ "ಬಸವಾದಿ ಶರಣರ ವಚನಗಳಲ್ಲಿ ಕೌಟುಂಬಿಕ ಮೌಲ್ಯಗಳು" ವಿಷಯದ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮ ಜೂನ್ 14ರಂದು ಭಾನುವಾರ ಬೆಳಿಗ್ಗೆ 10 ಗಂಟೆಗೆ ನಗರದ ಹಾತಲಗೇರಿ ಮುಖ್ಯರಸ್ತೆಯ ನಿಸರ್ಗ ಬಡಾವಣೆಯ 1ನೇ ಅಡ್ಡರಸ್ತೆಯಲ್ಲಿರುವ ಶರಣ ಅಶೋಕ ಬಿ. ಬರಗುಂಡಿ ಅವರ ನಿವಾಸ "ಬಸವಲಿಂಗ"ದಲ್ಲಿ ನಡೆಯಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವದಳ ಗದಗ-ಬೆಟಗೇರಿ ಅಧ್ಯಕ್ಷ ವಿ.ಕೆ. ಕರೇಗೌಡ್ರ ವಹಿಸಲಿದ್ದು, ಶರಣತತ್ವ ಚಿಂತಕಿ ಗೌರಕ್ಕ ಎನ್. ಬಡಿಗಣ್ಣವರ ಮುಖ್ಯ ಉಪನ್ಯಾಸ ನೀಡಲಿದ್ದಾರೆ.

ಬಸವಾದಿ ಶರಣರ ವಚನಗಳಲ್ಲಿ ಅಡಕವಾಗಿರುವ ಕೌಟುಂಬಿಕ ಮೌಲ್ಯಗಳು, ಸಾಮಾಜಿಕ ಬದ್ಧತೆ ಹಾಗೂ ಜೀವನ ಸಂದೇಶಗಳ ಕುರಿತು ಅವರು ಮಾತನಾಡಲಿದ್ದಾರೆ. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಬಸವದಳದ ಕಾರ್ಯಾಧ್ಯಕ್ಷ ಪ್ರಕಾಶ ಅಸುಂಡಿ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ಬನಹಟ್ಟಿ-ಬೈರನಹಟ್ಟಿಯಲ್ಲಿ ಖೇತ ಬಚಾವೋ ಜಾಗೃತಿ ಕಾರ್ಯಕ್ರಮ

# 'ಜಮೀನು ಉಳಿಸಿ' ಅಭಿಯಾನಕ್ಕೆ ರೈತರ ಸ್ಪಂದನೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಣ್ಣಿನ ಆರೋಗ್ಯ ಸಂರಕ್ಷಣೆ, ಕೃಷಿ ತ್ಯಾಜ್ಯಗಳ ಸಮರ್ಪಕ ಬಳಕೆ ಹಾಗೂ ಪರ್ಯಾಯ ಗೊಬ್ಬರಗಳ ಮಹತ್ವದ ಕುರಿತು ರೈತರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಐಸಿಎಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿ ಹಾಗೂ ಕೃಷಿ ಇಲಾಖೆ, ಗದಗ ಇವರ ಸಂಯುಕ್ತ ಆಶ್ರಯದಲ್ಲಿ ನರಗುಂದ ತಾಲೂಕಿನ ಬನಹಟ್ಟಿ ಹಾಗೂ ಬೈರನಹಟ್ಟಿ ಗ್ರಾಮಗಳಲ್ಲಿ "ಜಮೀನು ಉಳಿಸಿ" (ಖೇತ ಬಚಾವೋ) ಅಭಿಯಾನವನ್ನು ಹಮ್ಮಿಕೊಳ್ಳಲಾಯಿತು.



ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ. ವಿನಾಯಕ ನಿರಂಜನ ಮಾತನಾಡಿ, ಮಣ್ಣಿನ ಆರೋಗ್ಯ ಕಾಪಾಡಲು ಕೃಷಿ ತ್ಯಾಜ್ಯಗಳ ಮರುಬಳಕೆ, ಮಣ್ಣು ಮತ್ತು ನೀರಿನ ಸಂರಕ್ಷಣೆ ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು. ಸಾವಯವ ಪದಾರ್ಥಗಳ ಬಳಕೆಯಿಂದ ಮಣ್ಣಿನಲ್ಲಿರುವ ಉಪಯುಕ್ತ ಸೂಕ್ಷ್ಮಾಣುಗಳ ಸಂಖ್ಯೆ ಹೆಚ್ಚಾಗಿ, ಫಲವತ್ತತೆ ವೃದ್ಧಿಯಾಗುತ್ತದೆ ಎಂದು ತಿಳಿಸಿದರು.

ಕೃಷಿ ವಿಜ್ಞಾನ ಕೇಂದ್ರದ ಮತ್ತೋರ್ವ ವಿಜ್ಞಾನಿ ಡಾ. ಚೇತನಬಾಬು ತಾಂತ್ರಿಕ ಉಪನ್ಯಾಸ ನೀಡಿ, ಜೈವಿಕ ಗೊಬ್ಬರಗಳಾದ ಟ್ರೈಕೊಡರ್ಮಾ, ರೈಜೋಬಿಯಂ ಹಾಗೂ ಪಿ.ಎಸ್.ಬಿ. ಬಳಸಿ ಬೀಜೋಪಚಾರ ಮಾಡುವ ವಿಧಾನವನ್ನು ವಿವರಿಸಿದರು. ಜೊತೆ-ಗೆ ಕೊಟ್ಟಿಗೆ ಗೊಬ್ಬರ ಹಾಗೂ ಗೋ ಉತ್ಪನ್ನಗಳ ಉಪಯುಕ್ತತೆ ಕುರಿತು ರೈತರಿಗೆ ಮಾಹಿತಿ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ ಮಾತನಾಡಿ, ಜಾಗತಿಕ ಬಿಕ್ಕಟ್ಟಿನ ಪರಿಣಾಮದಿಂದ ರಸಗೊಬ್ಬರಗಳ ಕೊರತೆ ಎದುರಾಗುತ್ತಿರುವ ಹಿನ್ನೆಲೆಯಲ್ಲಿ ರೈತರು ಪರ್ಯಾಯ ಗೊಬ್ಬರಗಳ ಬಳಕೆಯತ್ತ ಹೆಚ್ಚಿನ ಗಮನ ಹರಿಸಬೇಕು ಎಂದು ಕರೆ ನೀಡಿದರು.

> "ಮಣ್ಣಿನ ಆರೋಗ್ಯವೇ ಕೃಷಿಯ ಜೀವಾಳ. ಸಾವಯವ ಮತ್ತು ಜೈವಿಕ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದರಿಂದ ಉತ್ಪಾದನಾ ವೆಚ್ಚ ಕಡಿಮೆಯಾಗಿ, ಭೂಮಿಯ ಫಲವತ್ತತೆ ಹೆಚ್ಚುತ್ತದೆ."
>
> **– ಡಾ. ವಿನಾಯಕ ನಿರಂಜನ,**
> ವಿಜ್ಞಾನಿ, ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿ

ಈ ಸಂದರ್ಭದಲ್ಲಿ ಕೃಷಿ ಇಲಾಖೆ ವತಿಯಿಂದ ರೈತರಿಗೆ ಉದ್ದು ಹಾಗೂ ತೊಗರಿಯ ಸುಧಾರಿತ ತಳಿಯ ಬೀಜಗಳನ್ನು ಪ್ರಾತ್ಯಕ್ಷಿಕೆಗಾಗಿ ವಿತರಿಸಲಾಯಿತು.

ನರಗುಂದ ಸಹಾಯಕ ಕೃಷಿ ನಿರ್ದೇಶಕ ಎಸ್.ಎಫ್. ಬೆಳವಟಿಗಿ ಸ್ವಾಗತಿಸಿದರು. ಶಿವಾನಂದ ಸಾತೆ ವಂದಿಸಿದರು.

ಕಾರ್ಯಕ್ರಮದಲ್ಲಿ 200ಕ್ಕೂ ಹೆಚ್ಚು ರೈತರು ಹಾಗೂ ರೈತ ಮಹಿಳೆಯರು ಭಾಗವಹಿಸಿ ಕೃಷಿ ತಜ್ಞರಿಂದ ಮಾಹಿತಿ ಪಡೆದುಕೊಂಡರು.

### ರೈತರಿಗೆ ಉದ್ದು-ತೊಗರಿ ಬೀಜ ವಿತರಣೆ

ಖೇತ ಬಚಾವೋ ಅಭಿಯಾನದ ಅಂಗವಾಗಿ ಬನಹಟ್ಟಿ ಹಾಗೂ ಬೈರನಹಟ್ಟಿ ಗ್ರಾಮಗಳ ರೈತರಿಗೆ ಕೃಷಿ ಇಲಾಖೆ ವತಿಯಿಂದ ಉದ್ದು ಮತ್ತು ತೊಗರಿಯ ಸುಧಾರಿತ ತಳಿಯ ಬೀಜಗಳನ್ನು ಪ್ರಾತ್ಯಕ್ಷಿಕೆಗಾಗಿ ವಿತರಿಸಿ, ಪರ್ಯಾಯ ಕೃಷಿ ಪದ್ಧತಿಗಳ ಕುರಿತು ಮಾಹಿತಿ ನೀಡಲಾಯಿತು.

## ಬಿಜೆಪಿ ಮಹಿಳಾ ಮೋರ್ಚಾ ಪದಾಧಿಕಾರಿಗಳ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ




ಭಾರತೀಯ ಜನತಾ ಪಾರ್ಟಿ ಮಹಿಳಾ ಮೋರ್ಚಾ ಗದಗ ನಗರ ಮಂಡಲದ ಪದಾಧಿಕಾರಿಗಳ ಸಭೆ ಪಕ್ಷದ ಆದೇಶದಂತೆ ನಗರದ ಬಿಜೆಪಿ ಕಚೇರಿಯಲ್ಲಿ ನಡೆಯಿತು.

ಸಭೆಯ ಅಧ್ಯಕ್ಷತೆಯನ್ನು ಗದಗ ನಗರ ಮಂಡಲ ಮಹಿಳಾ ಮೋರ್ಚಾ ಅಧ್ಯಕ್ಷೆ ಸ್ವಾತಿ ಅಕ್ಕಿ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಪ್ರಧಾನ ಕಾರ್ಯದರ್ಶಿ ಶಂಕರ ಕಾಕಿ, ಬಿಎಲ್ಎ-1 ಮಂಜುನಾಥ ಶಾಂತಗೇರಿ ಭಾಗವಹಿಸಿ ಸಂಘಟನೆ ಬಲವರ್ಧನೆ, ಮಹಿಳಾ ಮೋರ್ಚಾದ ಕಾರ್ಯಚಟುವಟಿಕೆಗಳು ಹಾಗೂ ಮುಂಬರುವ ಪಕ್ಷದ ಕಾರ್ಯಕ್ರಮಗಳ ಕುರಿತು ಚರ್ಚಿಸಿದರು.

ಸಭೆಯಲ್ಲಿ ಮಹಿಳಾ ಮೋರ್ಚಾದ ಉಪಾಧ್ಯಕ್ಷೆಯರಾದ ಪವಿತ್ರಾ ಮುದಗಲ್ಲ, ಶಾಂತಾ ತಿಮ್ಮಾಪೂರ, ಪ್ರಧಾನ ಕಾರ್ಯದರ್ಶಿಗಳಾದ ಪುಷ್ಪಾ ಪೂಜಾರ, ರೇಖಾ ಗವಳಿ, ಕೋಶಾಧ್ಯಕ್ಷೆ ಗೀತಾ ಅಣ್ಣಿಗೇರಿ, ಕಾರ್ಯದರ್ಶಿಗಳಾದ ಕವಿತಾ ಬಂಗಾರಿ, ನಿರ್ಮಲಾ ಬಳ್ಳಿ, ಭುವನೇಶ್ವರಿ ಹಿರೇಮಠ ಸೇರಿದಂತೆ ಪದಾಧಿಕಾರಿಗಳು ಹಾಗೂ ಸದಸ್ಯರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಸಂಕೇತಾ ಶಿದ್ಲಿಂಗ, ಮಂಗಳಾ ರಾಯಭಾಗಿ, ಸರೋಜಾ ಬಾರಕೇರ, ರಾಜೇಶ್ವರಿ ಜವಳಿ, ಶೈಲಜಾ ಜೊಸೆಫ್, ಜಯಶ್ರೀ ಕಮತರ ಸೇರಿದಂತೆ ಅನೇಕ ಮಹಿಳಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

ಮೂಲಸೌಕರ್ಯ ಕಲ್ಪಿಕೆಗೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಸ್ಪಂದನೆ; ಸ್ಥಳ ಪರಿಶೀಲನೆ ನಡೆಸಿದ ಜಂಟಿ ನಿರ್ದೇಶಕ

# ಕೈಗಾರಿಕಾ ವಲಯಕ್ಕೆ ಅಭಿವೃದ್ಧಿಯ ಸ್ಪರ್ಶ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಆನಂದ ಆಶ್ರಮ ರಸ್ತೆಯಲ್ಲಿರುವ ಮುಧೋಳ ಇಂಡಸ್ಟ್ರಿಯಲ್ ಎಸ್ಟೇಟ್‌ಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಿದರೆ ರಾಜ್ಯದಲ್ಲೇ ಮಾದರಿ ಕೈಗಾರಿಕಾ ವಲಯವಾಗಿ ರೂಪುಗೊಳ್ಳುವ ಎಲ್ಲ ಸಾಧ್ಯತೆಗಳಿವೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಪ್ರಶಾಂತ ಬಾರಿಗಿಡದ ಹೇಳಿದರು.



ಬುಧವಾರ ಇಂಡಸ್ಟ್ರಿಯಲ್ ಎಸ್ಟೇಟ್‌ಗೆ ಭೇಟಿ ನೀಡಿ ಉದ್ಯಮಿದಾರರ ಸಮಸ್ಯೆಗಳನ್ನು ಆಲಿಸಿದ ಅವರು, ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಪದಾಧಿಕಾರಿಗಳು ಹಾಗೂ ಉದ್ಯಮಿದಾರರೊಂದಿಗೆ ಸಭೆ ನಡೆಸಿ ಮಾತನಾಡಿದರು.

ಸುಮಾರು 25 ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವ ಈ ಕೈಗಾರಿಕಾ ವಲಯದಲ್ಲಿ 20ಕ್ಕೂ ಹೆಚ್ಚು ಕೈಗಾರಿಕೆಗಳು ಸಕ್ರಿಯವಾಗಿದ್ದು, 400ಕ್ಕೂ ಹೆಚ್ಚು ಕಾರ್ಮಿಕರಿಗೆ ನೇರ ಉದ್ಯೋಗ ಒದಗಿಸುತ್ತಿವೆ. ಜಿಲ್ಲೆಯ ಆರ್ಥಿಕ ಅಭಿವೃದ್ಧಿಗೆ ಈ ವಲಯದ ಕೊಡುಗೆ ಗಮನಾರ್ಹವಾಗಿದೆ ಎಂದು ಅವರು ಹೇಳಿದರು.

ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ನೇತೃತ್ವದಲ್ಲಿ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆಯಲ್ಲಿ ಸಲ್ಲಿಸಲಾದ ಮನವಿಗೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಸಕಾರಾತ್ಮಕವಾಗಿ ಸ್ಪಂದಿಸಿ ತಕ್ಷಣ ಸ್ಥಳ ಪರಿಶೀಲನೆಗೆ ಸೂಚನೆ ನೀಡಿದ್ದರು. ಅದರಂತೆ ಜಂಟಿ ನಿರ್ದೇಶಕರು ಎಸ್ಟೇಟ್‌ಗೆ ಭೇಟಿ ನೀಡಿ ವಾಸ್ತವ ಸ್ಥಿತಿಯನ್ನು ಪರಿಶೀಲಿಸಿದರು.

> "ಸ್ಥಳ ಪರಿಶೀಲನೆ ನಡೆಸಿ ಉದ್ಯಮಿದಾರರ ಸಮಸ್ಯೆಗಳನ್ನು ಆಲಿಸಲಾಗಿದೆ. ಸಮಗ್ರ ವರದಿಯನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಲಾಗುವುದು. ವರದಿ ಆಧರಿಸಿ ಉದ್ಯಮಿಗಳ ಹಿತದೃಷ್ಟಿಯಿಂದ ಸೂಕ್ತ ಕ್ರಮ ಕೈಗೊಳ್ಳಲಾಗುವುದು."
>
> **– ಪ್ರಶಾಂತ ಬಾರಿಗಿಡದ,**
> ಜಂಟಿ ನಿರ್ದೇಶಕ, ಜಿಲ್ಲಾ ಕೈಗಾರಿಕಾ ಕೇಂದ್ರ

ಸಭೆಯಲ್ಲಿ ಮಾತನಾಡಿದ ಉದ್ಯಮಿದಾರರು, ರಸ್ತೆ, ಚರಂಡಿ, ಒಳಚರಂಡಿ, ಕುಡಿಯುವ ನೀರು ಹಾಗೂ ಗುಣಮಟ್ಟದ ವಿದ್ಯುತ್ ಪೂರೈಕೆ ಸೇರಿದಂತೆ ಹಲವು ಮೂಲಭೂತ ಸೌಲಭ್ಯಗಳ ಕೊರತೆ ಕೈಗಾರಿಕೆಗಳ ಅಭಿವೃದ್ಧಿಗೆ ತೊಡಕಾಗಿದೆ ಎಂದು ಅಹವಾಲು ಸಲ್ಲಿಸಿದರು.

ಇಂಡಸ್ಟ್ರಿಯಲ್ ಎಸ್ಟೇಟ್‌ನಲ್ಲಿ ಕೋಲ್ಡ್ ಸ್ಟೋರೇಜ್, ವೇರ್‌ಹೌಸ್ ಸೇರಿದಂತೆ ಆಧುನಿಕ ಸೌಲಭ್ಯಗಳನ್ನು ಸ್ಥಾಪಿಸಲು ಸಾಕಷ್ಟು ಅವಕಾಶಗಳಿದ್ದು, ಉದ್ಯಮಿದಾರರು ಒಗ್ಗೂಡಿ ಸಂಘ ರಚಿಸಿಕೊಂಡರೆ ಸರ್ಕಾರದ ವಿವಿಧ ಯೋಜನೆಗಳ ಪ್ರಯೋಜನ ಪಡೆಯಲು ಅನುಕೂಲವಾಗಲಿದೆ ಎಂದು ಪ್ರಶಾಂತ ಬಾರಿಗಿಡದ ಸಲಹೆ ನೀಡಿದರು. ಚೇಂಬರ್ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಜಿಲ್ಲಾಡಳಿತದ ಸ್ಪಂದನೆಗೆ ಕೃತಜ್ಞತೆ ಸಲ್ಲಿಸಿ, ಉದ್ಯಮಿದಾರರ ಬಹುದಿನಗಳ ಬೇಡಿಕೆಗಳಿಗೆ ಶೀಘ್ರ ಪರಿಹಾರ ದೊರೆಯುವ ನಿರೀಕ್ಷೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಚೇಂಬರ್ ಕಾರ್ಯದರ್ಶಿ ಚನ್ನವೀರಪ್ಪ ಹುಣಶೀಕಟ್ಟಿ, ಉಪಾಧ್ಯಕ್ಷರಾದ ಸಿದ್ಧರಾಮಪ್ಪ ಉಮಚಗಿ, ಪ್ರಕಾಶ ಉಗಲಾಟದ, ಸಹ ಕಾರ್ಯದರ್ಶಿ ರಾಘವೇಂದ್ರ ಕಾಲವಾಡ ಹಾಗೂ ಉದ್ಯಮಿದಾರರಾದ ಬಸವರಾಜ ಅಂಗಡಿ, ವೀರಣ್ಣ ಕಾಡಪ್ಪನವರ, ಶ್ರೀಕಾಂತ ಅಂಗಡಿ, ಅರುಣ ಮಿಸ್ಕಿನ್, ಅಜ್ಜಣ್ಣ ಉಮಚಗಿ, ಚನ್ನಯ್ಯ ಹಿರೇಮಠ, ಶಿವಾನಂದ ನರಗುಂದ, ಸಂಜಯ ಮಿಸ್ಕಿನ್, ಚಂದ್ರಶೇಖರ ಉಗಲಾಟದ, ಬಸವರಾಜ ಕಾಡಪ್ಪನವರ, ಮಂಜಣ್ಣ ಮಲ್ಲರಡ್ಡಿ, ಗಂಗಾಧರ ನವಲಗುಂದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸೂರಣಗಿಯಲ್ಲಿ 'ಭೂಮಿ ಬಚಾವೋ' ಹಾಗೂ ದ್ವಿದಳ ಧಾನ್ಯ ಆತ್ಮನಿರ್ಭರ್ ಅಭಿಯಾನ ಜಾಗೃತಿ ಕಾರ್ಯಕ್ರಮ

# ಸಾವಯವ ಕೃಷಿಗೆ ಒತ್ತು ನೀಡಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಣ್ಣಿನ ಫಲವತ್ತತೆ ಕಾಪಾಡಲು ರೈತರು ರಾಸಾಯನಿಕ ಗೊಬ್ಬರಗಳ ಮೇಲಿನ ಅವಲಂಬನೆ ಕಡಿಮೆ ಮಾಡಿ ಸಾವಯವ ಹಾಗೂ ನೈಸರ್ಗಿಕ ಕೃಷಿಗೆ ಆದ್ಯತೆ ನೀಡಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಚೇತನಾ ಪಾಟೀಲ ಹೇಳಿದರು.

ತಾಲೂಕಿನ ಸೂರಣಗಿ ಗ್ರಾಮದಲ್ಲಿ ಕೃಷಿ ಇಲಾಖೆಯ ವತಿಯಿಂದ ಹಮ್ಮಿಕೊಂಡಿದ್ದ 'ಭೂಮಿ ಬಚಾವೋ' ಹಾಗೂ ದ್ವಿದಳ ಧಾನ್ಯಗಳಲ್ಲಿ ಆತ್ಮನಿರ್ಭರ್ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ವರ್ಷಗಳಲ್ಲಿ ರಾಸಾಯನಿಕ ಗೊಬ್ಬರಗಳ ಬಳಕೆ ಹೆಚ್ಚಾಗುತ್ತಿರುವುದು ಮಣ್ಣಿನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ರೈತರು ತಮ್ಮ ಜಮೀನಿನ ಒಂದು ಭಾಗವನ್ನಾದರೂ ಸಾವಯವ ಮತ್ತು ನೈಸರ್ಗಿಕ ಕೃಷಿಗೆ ಮೀಸಲಿಟ್ಟು ಪ್ರಯೋಗಾತ್ಮಕವಾಗಿ ಕೃಷಿ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ದ್ವಿದಳ ಧಾನ್ಯಗಳಿಗೆ ಮಾರುಕಟ್ಟೆಯಲ್ಲಿ ಉತ್ತಮ ಬೇಡಿಕೆ ಇದ್ದು, ರೈತರು ಹೆಸರು, ತೊಗರಿ, ಉದ್ದು ಸೇರಿದಂತೆ ದ್ವಿದಳ ಧಾನ್ಯಗಳ ಬೆಳೆಗೆ ಒತ್ತು ನೀಡುವ ಮೂಲಕ ಆರ್ಥಿಕ ಸ್ವಾವಲಂಬನೆ ಸಾಧಿಸಬಹುದು ಎಂದರು.

ಪ್ರತಿ ವರ್ಷ ಮಣ್ಣಿನ ಪರೀಕ್ಷೆ ಮಾಡಿಸಿ ಅದರ ವರದಿ ಆಧರಿಸಿ ಗೊಬ್ಬರ ಮತ್ತು ಬೆಳೆ ಆಯ್ಕೆ ಮಾಡಿದರೆ ಕೃಷಿಯಲ್ಲಿ ಉತ್ತಮ ಫಲಿತಾಂಶ ಪಡೆಯಬಹುದು ಎಂದು ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕೃಷಿ ಇಲಾಖೆಯ ಉಪನಿರ್ದೇಶಕಿ ಜಿ.ಎಸ್. ಸ್ಫೂರ್ತಿ, ರೈತರು ಅಗತ್ಯಕ್ಕಿಂತ ಹೆಚ್ಚು ರಾಸಾಯನಿಕ ಗೊಬ್ಬರ ಬಳಕೆ ಮಾಡುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದ್ದು, ಮಣ್ಣಿನ ಸತ್ವ ಕಾಪಾಡಲು ಸಮತೋಲಿತ ಗೊಬ್ಬರ ಬಳಕೆ ಅಗತ್ಯ ಎಂದರು.

ಇಫ್ಕೋ ಕಂಪನಿಯ ಕ್ಷೇತ್ರ ಅಧಿಕಾರಿ ಯಕ್ಷಿತ್ ಡಿ.ಎಸ್., ವಿಜ್ಞಾನಿಗಳಾದ ಚೇತನ್ ಬಾಬು, ವಿನಾಯಕ ನಿರಂಜನ ಹಾಗೂ ಸುಧಾ ಮಂಕಣಿ ರೈತರಿಗೆ ಕೃಷಿ ತಂತ್ರಜ್ಞಾನ ಮತ್ತು ಮಣ್ಣಿನ ಆರೋಗ್ಯ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಶಿವಕುಮಾರ ಕಾಶಪ್ಪನವರ, ಬಸವರಾಜ ಇಟಗಿ, ಶಂಕ್ರಣ್ಣ ಶಿರನಹಳ್ಳಿ, ಶಶಿಕಲಾ ಸಾಸಲವಾಡ, ಪ್ರಕಾಶ ಕಳ್ಳಿಹಾಳ, ಚನ್ನಪ್ಪ ಶಿರನಹಳ್ಳಿ, ಚಂದ್ರಶೇಖರ ಮೂಲಿಮನಿ ಸೇರಿದಂತೆ ರೈತರು ಭಾಗವಹಿಸಿದ್ದರು.

ಅಂತರರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ 10 ದಿನಗಳ ಯೋಗಾಸನ, ಪ್ರಾಣಾಯಾಮ ತರಬೇತಿ ಆರಂಭ

# ಲಕ್ಕುಂಡಿಯಲ್ಲಿ ಯೋಗ ಶಿಬಿರಕ್ಕೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಇಲ್ಲಿನ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಯೋಗಾಸನ ಹಾಗೂ ಪ್ರಾಣಾಯಾಮ ಶಿಬಿರಕ್ಕೆ ಚಾಲನೆ ನೀಡಲಾಯಿತು.



ಅನ್ನಪೂರ್ಣೇಶ್ವರಿ ಸತ್ಸಂಗ ಸಮಿತಿ, ಎಸ್ಎಸ್‌ವೈ ಬಳಗ ಹಾಗೂ ಶಿವಪಾರ್ವತಿ ಯೋಗ ಫೌಂಡೇಶನ್, ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿರುವ ಶಿಬಿರವನ್ನು ನಿವೃತ್ತ ಉಪತಹಶೀಲ್ದಾರ ಶರಣಬಸವೇಶ ಕಳ್ಳಿಮಠ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಯೋಗವು ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಗೆ ಅತ್ಯುತ್ತಮ ಸಾಧನವಾಗಿದ್ದು, ಇಂದಿನ ಒತ್ತಡದ ಬದುಕಿನಲ್ಲಿ ಯೋಗ, ಪ್ರಾಣಾಯಾಮ ಹಾಗೂ ಆರೋಗ್ಯಕರ ಆಹಾರ ಪದ್ಧತಿಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅಗತ್ಯವಾಗಿದೆ ಎಂದು ಹೇಳಿದರು.

ಯೋಗ ಶಿಕ್ಷಕ ಸಿದ್ದಣ್ಣ ಜವಳಿ ಮಾತನಾಡಿ, ಯೋಗವು ಭಾರತೀಯ ಸಂಸ್ಕೃತಿಯ ವೈಜ್ಞಾನಿಕ ಪರಂಪರೆಯಾಗಿದ್ದು, ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದರು. ಕಳೆದ 11 ವರ್ಷಗಳಿಂದ ವಿಶ್ವದಾದ್ಯಂತ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಲಾಗುತ್ತಿದ್ದು, ಶಿಬಿರವು ಪ್ರತಿದಿನ ಬೆಳಿಗ್ಗೆ 6ರಿಂದ 7 ಗಂಟೆಯವರೆಗೆ 10 ದಿನಗಳ ಕಾಲ ನಡೆಯಲಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಉಪನ್ಯಾಸಕ ಆರ್.ಎನ್. ಗೌಡರ, ಸಿದ್ದಪ್ಪ ಚಬ್ಬರಭಾವಿ, ಗ್ರಾಮ ಪಂಚಾಯಿತಿ ಮಾಜಿ ಸದಸ್ಯೆ ಈರಮ್ಮ ಚಬ್ಬರಭಾವಿ, ಶಿಕ್ಷಕಿ ಮಂಜುಳಾ ಕವಲೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**150ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ; ಪೌರಕಾರ್ಮಿಕರಿಗೂ ಗೌರವ**

## ಇಂದು ಎಡಿಎಸ್‌ಎಸ್‌ನಿಂದ ವಿಶೇಷ ಸಮಾರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಿ.ಆರ್. ಅಂಬೇಡ್ಕರ್ ದಲಿತ ಸಂಘರ್ಷ ಸಮಿತಿ (ಎಡಿಎಸ್‌ಎಸ್) ಗದಗ ಜಿಲ್ಲಾ ಘಟಕದ ವತಿಯಿಂದ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಶೇ.80ಕ್ಕಿಂತ ಹೆಚ್ಚು ಅಂಕ ಪಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಸಮಾರಂಭವನ್ನು ಜೂನ್ 14ರಂದು ಭಾನುವಾರ ಬೆಳಿಗ್ಗೆ 11 ಗಂಟೆಗೆ ನಗರದ ಡಾ. ಬಾಬು ಜಗಜೀವನರಾಂ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಚಲನಚಿತ್ರ ನಟ ಹಾಗೂ ಸಾಮಾಜಿಕ ಹೋರಾಟಗಾರ ಚೇತನ್ ಅಹಿಂಸಾ ಉದ್ಘಾಟಿಸಲಿದ್ದು, ಹುಬ್ಬಳ್ಳಿ–ಧಾರವಾಡ ಪೂರ್ವ ಕ್ಷೇತ್ರದ ಶಾಸಕ ಪ್ರಸಾದ್ ಅಬ್ಬಯ್ಯ ಹಾಗೂ ವಿಧಾನ ಪರಿಷತ್ ಸದಸ್ಯ ಎಫ್.ಎಚ್. ಜಕ್ಕಪ್ಪನವರ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕಾರ್ಯಕ್ರಮದಲ್ಲಿ ಬಂಡಾಯ ಸಾಹಿತಿ ಬಸವರಾಜ ಸೂಳಿಬಾವಿ, ಹುಲಕೋಟಿಯ ಪಿಯು ಕಾಲೇಜಿನ ಪ್ರಾಂಶುಪಾಲ ಅರ್ಜುನ ಗೊಳಸಂಗಿ ಹಾಗೂ ಶರೀಫ್ ಬಿಳೆಯಲಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಿಥುನ್ ಜಿ. ಪಾಟೀಲ, ಪರಮೇಶ ಕಾಳೆ, ಡಾ. ನಂದಾ ಅನಬರಟ್ಟಿ, ಆರ್.ಎಸ್. ಬುರಡಿ, ಎಸ್. ಎನ್. ಬಳ್ಳಾರಿ, ವಿರೂಪಾಕ್ಷಪ್ಪ ರಾಮಗಿರಿ, ಶೇಖಪ್ಪ ತಮ್ಮಣ್ಣವರ, ಸಿದ್ದಪ್ಪ ಲಿಂಗಧಾಳ, ಆನಂದ ಸಿಂಗಾಡಿ, ಸಂಜಯ ದೊಡ್ಡಮನಿ, ವಿಜಯ ಕಲ್ಮನಿ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ.

ಈ ಸಂದರ್ಭದಲ್ಲಿ 150ಕ್ಕೂ ಹೆಚ್ಚು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು. ಅಲ್ಲದೇ ನಗರದ ಸ್ವಚ್ಛತೆಗೆ ಪ್ರತಿದಿನ ಶ್ರಮಿಸುತ್ತಿರುವ 25 ಪೌರಕಾರ್ಮಿಕರನ್ನು ಸನ್ಮಾನಿಸಿ ಗೌರವಿಸಲಾಗುವುದು ಎಂದು ಎಡಿಎಸ್‌ಎಸ್ ಜಿಲ್ಲಾ ಅಧ್ಯಕ್ಷ ಶಿವಾನಂದ ತಮ್ಮಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

"ಶಿಕ್ಷಣದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುವುದು ಸಮಾಜದ ಜವಾಬ್ದಾರಿ. ಪ್ರತಿಭೆಗಳಿಗೆ ಗೌರವ ನೀಡುವುದರ ಜೊತೆಗೆ ಸಮಾಜಸೇವೆಯಲ್ಲಿ ತೊಡಗಿರುವ ಪೌರಕಾರ್ಮಿಕರ ಸೇವೆಯನ್ನು ಸ್ಮರಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ."
– **ಶಿವಾನಂದ ತಮ್ಮಣ್ಣವರ,** ಜಿಲ್ಲಾಧ್ಯಕ್ಷರು, ಡಾ. ಬಿ.ಆರ್. ಅಂಬೇಡ್ಕರ್ ದಲಿತ ಸಂಘರ್ಷ ಸಮಿತಿ, ಗದಗ

**135 ವಿದ್ಯಾರ್ಥಿಗಳಿಗೆ ಪುರಸ್ಕಾರ; ರಾಷ್ಟ್ರ ಮಟ್ಟದ ಸಾಧಕ ಬಸವರಾಜ ಕೆಂಪವಾಡರಿಗೆ ಭವ್ಯ ಗೌರವ**

# ಪ್ರತಿಭೆಗೆ ಬೆನ್ನೆಲುಬಾದ ಗಾಣಿಗ ಸಮಾಜ

■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣವೇ ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಮೂಲಾಧಾರವಾಗಿದ್ದು, ಪ್ರತಿಭಾವಂತ ಮಕ್ಕಳನ್ನು ಗುರುತಿಸಿ ಪ್ರೋತ್ಸಾಹಿಸುವ ಮೂಲಕವೇ ಸಮಾಜದ ಭವಿಷ್ಯವನ್ನು ಉಜ್ವಲಗೊಳಿಸಬಹುದು ಎಂದು ಶಿವಾನಂದ ಬ್ರಹನ್ಮಠದ ಸದಾಶಿವಾನಂದ ಸ್ವಾಮೀಜಿ ಹೇಳಿದರು.

ನಗರದ ವಿವೇಕಾನಂದ ನಗರದ ಗಾಣಿಗ ಸಮುದಾಯ ಭವನದಲ್ಲಿ ಶನಿವಾರ ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗವರ್ಧಕ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ, ನಿವೃತ್ತ ನೌಕರರ ಸನ್ಮಾನ, ವಾರ್ಷಿಕ ಸಭೆ ಹಾಗೂ ವಧು–ವರರ ಸಮಾವೇಶ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ 135 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಇದೇ ವೇಳೆ ಭಾರತೀಯ ಅರಣ್ಯ ಸೇವೆಯಲ್ಲಿ ರಾಷ್ಟ್ರ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಬಸವರಾಜ ಕೆಂಪವಾಡ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು.



ಶಿಕ್ಷಣವು ಕೇವಲ ಉದ್ಯೋಗ ಪಡೆಯುವ ಸಾಧನವಲ್ಲ; ಅದು ವ್ಯಕ್ತಿಯ ಬೌದ್ಧಿಕ ಬೆಳವಣಿಗೆ, ಆರ್ಥಿಕ ಸ್ವಾವಲಂಬನೆ, ಉತ್ತಮ ಆರೋಗ್ಯ ಹಾಗೂ ಸಮಾಜದ ಅಭಿವೃದ್ಧಿಗೆ ಶಕ್ತಿಯಾಗಿದೆ. ಸಮಾಜದ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನೆರವಾಗುವ ನಿಟ್ಟಿನಲ್ಲಿ ಸಮುದಾಯ ಭವನಗಳಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೆ ಕೋಚಿಂಗ್ ತರಗತಿಗಳನ್ನು ಆರಂಭಿಸಬೇಕು ಎಂದು ಸ್ವಾಮೀಜಿ ಸಲಹೆ ನೀಡಿದರು.

ನಿವೃತ್ತ ಡಿಡಿಪಿಐ ಐ.ಬಿ. ಬೆನಕೊಪ್ಪ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಬದುಕಿನಲ್ಲಿ ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ ಮತ್ತು ಮೌಲ್ಯಗಳೂ ಅಗತ್ಯ. ಅಂಕಗಳು ಮಾತ್ರ ಪ್ರತಿಭೆಯ ಮಾನದಂಡವಲ್ಲ. ಪ್ರತಿಯೊಬ್ಬ ಮಗುವಿನಲ್ಲೂ ವಿಶಿಷ್ಟ ಸಾಮರ್ಥ್ಯ ಅಡಗಿದ್ದು, ಅದನ್ನು ಗುರುತಿಸಿ ಬೆಳೆಸುವುದು ಶಿಕ್ಷಕರು ಮತ್ತು ಪಾಲಕರ ಕರ್ತವ್ಯ ಎಂದು ಹೇಳಿದರು.

ಭಾರತೀಯ ಅರಣ್ಯ ಸೇವೆಯಲ್ಲಿ ರಾಷ್ಟ್ರ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಬಸವರಾಜ ಕೆಂಪವಾಡ ಮಾತನಾಡಿ, ಉತ್ತಮ ಶಿಕ್ಷಣ ಮತ್ತು ಸ್ಪಷ್ಟ ಗುರಿಯಿದ್ದರೆ ಯಾವುದೇ ಸಾಧನೆ ಅಸಾಧ್ಯವಲ್ಲ. ಮಕ್ಕಳ ಆಸಕ್ತಿಗೆ ತಕ್ಕಂತೆ ಅವಕಾಶ ಕಲ್ಪಿಸಿದರೆ ಅವರು ಜೀವನದಲ್ಲಿ ದೊಡ್ಡ ಮಟ್ಟದ ಸಾಧನೆ ಮಾಡಬಹುದು ಎಂದು ಹೇಳಿದರು.

"ಬಡ ಮಕ್ಕಳ ಶಿಕ್ಷಣಕ್ಕೆ ಸಮಾಜವೇ ಬೆನ್ನೆಲುಬಾಗಿ ನಿಲ್ಲಬೇಕು. ಪ್ರತಿಭೆಗಳಿಗೆ ಅವಕಾಶ ನೀಡಿದರೆ ಅವರು ಸಮಾಜದ ಹೆಮ್ಮೆಯಾಗಿ ಬೆಳೆಯುತ್ತಾರೆ."
– **ಸದಾಶಿವಾನಂದ ಸ್ವಾಮೀಜಿ,** ಶಿವಾನಂದ ಬ್ರಹನ್ಮಠ.

ಜಿಲ್ಲಾ ಗಾಣಿಗ ಸಮಾಜದ ಅಧ್ಯಕ್ಷ ಬಸವರಾಜ ಬಿಂಗಿ ಮಾತನಾಡಿ, ಕಳೆದ ಹತ್ತು ವರ್ಷಗಳಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ನಿರಂತರವಾಗಿ ನಡೆಸಲಾಗುತ್ತಿದೆ. ಸಮಾಜದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವ ಮೂಲಕ ಉನ್ನತ ಸಾಧನೆಗೆ ಸ್ಫೂರ್ತಿ ತುಂಬುವುದು ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಗೌರವಾಧ್ಯಕ್ಷ ಷಣ್ಮುಖಪ್ಪ ಬಡ್ನಿ, ಕಟ್ಟಡ ಸಮಿತಿ ಅಧ್ಯಕ್ಷ ಹಾಗೂ ಜಿಪಂ ಮಾಜಿ ಅಧ್ಯಕ್ಷ ನಿಂಗಪ್ಪ ಕೆಂಗಾರ, ಜಿಲ್ಲಾ ಗಾಣಿಗ ಸಮಾಜದ ಉಪಾಧ್ಯಕ್ಷ ಬಿ.ಬಿ. ಐನಾಪೂರ ಸೇರಿದಂತೆ ಸಮಾಜದ ಮುಖಂಡರು ಹಾಗೂ ಟ್ರಸ್ಟ್ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ನಿಷ್ಠಾವಂತ ನಾಯಕನಿಗೆ ನ್ಯಾಯ ನೀಡಿ

▶▶ಮೊದಲನೇ ಪುಟದಿಂದ

ಅವರು, ಪಕ್ಷದ ಬಲವರ್ಧನೆ ಹಾಗೂ ಸಂಘಟನೆಗಾಗಿ ಜಿ.ಎಸ್. ಪಾಟೀಲ ಅವರು ಹಲವು ವರ್ಷಗಳಿಂದ ದುಡಿಯುತ್ತಿದ್ದು, ಅವರ ಸೇವೆಯನ್ನು ಪರಿಗಣಿಸಿ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರಾಜಾಸಾಬ್ ಸಾಂಗ್ಲಿಕರ್, ನಬಿಸಾಬ್ ಕೆಲೂರು, ಬಾವಸಾಬ್ ಬೆಟಗೇರಿ, ಮುರ್ತುಜಾ ಡಾಲಾಯತ್, ಅಬ್ದುಲ್ ರಜಾಕ್ ಕೊಲಕಾರ್, ಇಸ್ಮಾಯಿಲ್ ಹೊರಪೇಟಿ, ಬಸೀರ್ ವಡ್ಡಟ್ಟಿ, ಡಿ.ಎಂ. ಕಾತರಕಿ ಹಾಗೂ ಅಬ್ದುಲ್ ರೆಹಮಾನ್ ಕಲಕೇರಿ ಉಪಸ್ಥಿತರಿದ್ದರು.

**'ಪಕ್ಷಕ್ಕಾಗಿ ಇಡೀ ಕುಟುಂಬ ದುಡಿದಿದೆ'** : ಶಿರಹಟ್ಟಿ ತಾಲೂಕಿನ ಕಾಂಗ್ರೆಸ್ ಪಕ್ಷ ಹಾಗೂ ಅಖಿಲ ಕರ್ನಾಟಕ ಡಿ.ಕೆ. ಶಿವಕುಮಾರ್ ಅಭಿಮಾನಿ ಬಳಗದ ಮುಖಂಡರು ಸಹ ಜಿ.ಎಸ್. ಪಾಟೀಲ ಪರವಾಗಿ ಬೆಂಬಲ ವ್ಯಕ್ತಪಡಿಸಿ, ಅವರ ಇಡೀ ಕುಟುಂಬ ಕಾಂಗ್ರೆಸ್ ಪಕ್ಷದ ಬೆಳವಣಿಗೆಗಾಗಿ ನಿರಂತರವಾಗಿ ದುಡಿದಿದೆ. ಪಕ್ಷದ ನಿಷ್ಠಾವಂತ ನಾಯಕನಾಗಿರುವ ಅವರಿಗೆ ಸಚಿವ ಸಂಪುಟದಲ್ಲಿ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಕಾಂಗ್ರೆಸ್ ಪಕ್ಷದ ಮುಖಂಡ ಈರಣ್ಣ ಕೋಟಿ ಮಾತನಾಡಿ, ರೋಣ ಶಾಸಕ ಜಿ.ಎಸ್ ಪಾಟೀಲ್ ಅವರು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿದ್ದು, ಈ ಭಾರಿ ಅವರಿಗೆ ಸಚಿವ ಸ್ಥಾನ ಕೊಡಲೇಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಮಹಾಂತೇಶ ದಶಮನಿ, ಬಸವರಾಜ ಕಂಬಳಿ, ಚಂದ್ರಶೇಖರ ಮುಂಡವಾಡ, ರವಿ ಘಂಟಿ, ಈರಣ್ಣ, ಗೋವಿಂದ ಬಾಗೇವಾಡಿ, ಅಪ್ಪಣ್ಣ ಪಾಟೀಲ ಹಾಗೂ ಮುತ್ತಣ್ಣ ಮುಂಡವಾಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ದೀರ್ಘದಂಡ ನಮಸ್ಕಾರ ಮೂಲಕ ಕಾರ್ಯಕರ್ತರ ಒತ್ತಾಯ**

# ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ಕೊಡಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರೋಣ ಕ್ಷೇತ್ರದ ಶಾಸಕ ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ.ಎಸ್. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿ ಹಾಲಕೆರೆ ಗ್ರಾಮದಲ್ಲಿ ಅಭಿಮಾನಿಗಳು ಮತ್ತು ಕಾಂಗ್ರೆಸ್ ಕಾರ್ಯಕರ್ತರು ದೀರ್ಘದಂಡ ನಮಸ್ಕಾರ ಹಾಕುವ ಮೂಲಕ ವಿನೂತನ ಹೋರಾಟ ನಡೆಸಿದರು.

ಗ್ರಾಮದ ಬಸವೇಶ್ವರ ವೃತ್ತದಿಂದ ಶ್ರೀ ಅನ್ನದಾನೇಶ್ವರ ಮಠದವರೆಗೆ ನಡೆದ ದೀರ್ಘದಂಡ ನಮಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡಿದ ಹಾಲಕೆರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಅಂದಾನಗೌಡ ಪಾಟೀಲ, ಜಿ.ಎಸ್. ಪಾಟೀಲರ ಹಿರಿತನ, ಪಕ್ಷಕ್ಕೆ ಸಲ್ಲಿಸಿರುವ ಸೇವೆ ಹಾಗೂ ಕ್ಷೇತ್ರದ ಅಭಿವೃದ್ಧಿಗೆ ಅವರು ತೆ–ೂರಿದ ಬದ್ಧತೆಯನ್ನು ಪರಿಗಣಿಸಿ ಸಚಿವ ಸ್ಥಾನ ನೀಡಲೇಬೇಕು ಎಂದು ಒತ್ತಾಯಿಸಿದರು.

ಜಿ.ಎಸ್. ಪಾಟೀಲರು ವಿವಿಧ ನಿಗಮ–ಮಂಡಳಿಗಳ ಅಧ್ಯಕ್ಷರಾಗಿ ಯಶಸ್ವಿಯಾಗಿ ಕಾರ್ಯನಿರ್ವಹಿಸಿದ್ದು, ಕೊಟ್ಟ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಿದ ಆಡಳಿತ ಅನುಭವ ಹೊಂದಿದ್ದಾರೆ. ಅವರ ಕಾರ್ಯದಕ್ಷತೆ ಮತ್ತು ಜನಪರ ಚಿಂತನೆಗೆ ಸಚಿವ ಸ್ಥಾನ ಸೂಕ್ತ ಗೌರವವಾಗಲಿದೆ ಎಂದರು.



**ಅಭಿಮಾನಿಗಳ ಹಕ್ಕೊತ್ತಾಯ**

- ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು
- ರೋಣ ಕ್ಷೇತ್ರಕ್ಕೆ ಸಚಿವ ಸ್ಥಾನ ಸಿಗಬೇಕು
- ಹಿರಿತನ ಮತ್ತು ಸಂಘಟನಾ ಸೇವೆಗೆ ಗೌರವ ಸಿಗಬೇಕು
- ಸಚಿವ ಸ್ಥಾನ ನೀಡದಿದ್ದರೆ ಹೋರಾಟ ತೀವ್ರಗೊಳಿಸಲಾಗುವುದು

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಗಿರೀಶಗೌಡ ಮುಲ್ಕಿಪಾಟೀಲ ಮಾತನಾಡಿ, ಜಿ.ಎಸ್. ಪಾಟೀಲರು ಯಾವುದೇ ಹಗರಣಗಳಿಲ್ಲದ ಸ್ವಚ್ಛ ರಾಜಕಾರಣಿಯಾಗಿ ಗುರುತಿಸಿಕೊಂಡಿದ್ದು, ಈ ಭಾಗ–ಕ್ಕೆ ಸಚಿವ ಸ್ಥಾನ ಸಿಗದಿರುವುದು ಜನರಲ್ಲಿ ಬೇಸರ ಮೂಡಿಸಿದೆ. ಈ ಬಾರಿ ಸಚಿವ ಸ್ಥಾನ ನೀಡದಿದ್ದರೆ ಕಾರ್ಯಕರ್ತರು ಹಾಗೂ ಮುಖಂಡರು ಸಾಮೂಹಿಕ ರಾಜೀನಾಮೆ ನೀಡಿ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ನರೇಗಲ್ಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶರಣಪ್ಪ ಬೆಟಗೇರಿ ಮಾತನಾಡಿ, ಸಚಿವ ಸ್ಥಾನಕ್ಕಾಗಿ ಅಗತ್ಯವಿದ್ದರೆ ರೋಣ ಕ್ಷೇತ್ರದ ಸಾವಿರಾರು ಕಾರ್ಯಕರ್ತರು ತುಮಕೂರಿನಿಂದ ಬೆಂಗಳೂರಿನ ಕೆಪಿಸಿಸಿ ಕಚೇರಿವರೆಗೆ ಪಾದಯಾತ್ರೆ ನಡೆಸಿ ಹೋರಾಟ ಮಾಡಲು ಸಿದ್ಧರಿದ್ದಾರೆ ಎಂದು ಹೇಳಿದರು.

ಆನಂದ ಹಳ್ಳಿ, ಬಸವರಾಜ ಪೂಜಾರ, ಅಪ್ಪಣ್ಣ ಹಳ್ಳಿ, ಪರಶುರಾಮ ತಲೇಖಾನ್, ಅಭಿಷೇಕ ಕುಸಮ್ಮನವರ, ಅಂದಪ್ಪ ಕುರಿ, ಬಸವರಾಜ ಹುಲ್ಯಾಳ, ಭೀಮಪ್ಪ ಖ್ಯಾರ, ಮುತ್ತಪ್ಪ ಪೂಜಾರ, ದುರುಗಪ್ಪ ತಲೇಖಾನ್, ಹುಲಗಪ್ಪ ಬಂಗಾಳಿಗಿಡದ, ಮುದಿಯಪ್ಪ ಪೂಜಾರ ಸೇರಿದಂತೆ ಅನೇಕರು ಭಾಗವಹಿಸಿ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿದರು.

ಸೊಪ್ಪಯ್ಯ ಸೊಪ್ಪಿಹಿರೇಮಠ, ವೀರಣ್ಣ ಹಳ್ಳಿ, ಮಹೇಶ ಕುರಿ, ಹನಮಪ್ಪ ತೊಂಡಿಹಾಳ, ತಿಮ್ಮರೆಡ್ಡೆಪ್ಪ ಹೊಸಮನಿ, ಶರಣಪ್ಪ ಪೂಜಾರ, ಬಾಳಪ್ಪ ಬುರಡಿ, ಬಸಪ್ಪ ಮೂಲಿಮನಿ, ಮಹಾಂತೇಶ ಪ್ರಭಣ್ಣವರ, ಪ್ರವೀಣ ಬೈರಗೊಂಡ, ನವೀನ್ ಮಾದಿನೂರ, ಅಂದೇಶ ಶಿರೂರು, ವೀರಭದ್ರಪ್ಪ ನವಲಗುಂದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

"ಜಿ. ಎಸ್. ಪಾಟೀಲರು ಜಾತಿ, ಮತಗಳ ಗಡಿಯನ್ನು ಮೀರಿದ ಜನನಾಯಕರು. ಪಕ್ಷ ಸಂಘಟನೆ ಹಾಗೂ ಕ್ಷೇತ್ರದ ಅಭಿವೃದ್ಧಿಗೆ ಅವರ ಕೊಡುಗೆ ಅಪಾರ. ಅಂತಹ ನಾಯಕನಿಗೆ ಸಚಿವ ಸ್ಥಾನ ನೀಡುವುದು ಕಾಂಗ್ರೆಸ್ ಪಕ್ಷದ ಕರ್ತವ್ಯವಾಗಿದೆ."
**–ಅಂದಾನಗೌಡ ಪಾಟೀಲ,** ಅಧ್ಯಕ್ಷರು, ಹಾಲಕೆರೆ ಪಿಕೆಪಿಎಸ್

**ಅಂತ್ಯಸಂಸ್ಕಾರದಲ್ಲಿ ತಪ್ಪದೆ ಭಾಗಿಯಾಗುತ್ತಿರುವ ಬೀದಿ ನಾಯಿ; ಗ್ರಾಮಸ್ಥರಲ್ಲಿ ಅಚ್ಚರಿ–ಕುತೂಹಲ**

# ಅಂತ್ಯಯಾತ್ರೆಯ 'ಮೌನ ಸಂಗಾತಿ'!

■ವಿಜಯಸಾಕ್ಷಿ ಸುದ್ದಿ, ಡಂಬಳ

ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಡಂಬಳ ಗ್ರಾಮದಲ್ಲಿ ಅಪರೂಪದ ಹಾಗೂ ವಿಸ್ಮಯಕಾರಿ ಘಟನೆಯೊಂದು ಗ್ರಾಮಸ್ಥರ ಗಮನ ಸೆಳೆದಿದೆ. ಗ್ರಾಮದ ವಿವಿಧ ಬಡಾವಣೆಗಳಲ್ಲಿ ಯಾರೇ ನಿಧನ ಹೊಂದಿದರೂ, ಬಿಳಿ ಬಣ್ಣದ ಬೀದಿ ನಾಯಿಯೊಂದು ಅಂತ್ಯಯಾತ್ರೆಯಲ್ಲಿ ತಪ್ಪದೆ ಭಾಗವಹಿಸಿ ಸ್ಮಶಾನದವರೆಗೂ ತೆರಳುತ್ತಿರುವುದು ಅಚ್ಚರಿಗೆ ಕಾರಣವಾಗಿದೆ.

ಗ್ರಾಮಸ್ಥರ ಮಾಹಿತಿಯ ಪ್ರಕಾರ, ಕೆಲ ತಿಂಗಳ ಹಿಂದೆ ಪಾರಮ್ಮ ಎಂಬ ಮಹಿಳೆಯರ ನಿಧನದ ಬಳಿಕ ಈ ವಿಚಿತ್ರ ನಡೆ ಆರಂಭವಾಗಿದೆ. ಆ ಬಳಿಕ ಗ್ರಾಮದಲ್ಲಿ ನಡೆಯುವ ಪ್ರತಿಯೊಂದು ಅಂತ್ಯಸಂಸ್ಕಾರದ ಮೆರವಣಿಗೆಯಲ್ಲೂ ನಾಯಿ ಕಾಣಿಸಿಕೊಳ್ಳುತ್ತಿದ್ದು, ಮೃತರ ಮನೆ ಬಳಿಯಿಂದಲೇ ಮೆರವಣಿಗೆಯೊಂದಿಗೆ ಸಾಗುತ್ತದೆ. ಸ್ಮಶಾನಕ್ಕೆ ತಲುಪಿದ ನಂತರವೂ ಅಂತ್ಯಸಂಸ್ಕಾರ ಪೂರ್ಣಗೊಳ್ಳುವವರೆಗೂ ಅಲ್ಲಿಯೇ ಉಳಿದುಕೊಂಡು, ಬಳಿಕ ತನ್ನ ದಾರಿಯನ್ನು ಹಿಡಿಯುತ್ತದೆ ಎನ್ನಲಾಗಿದೆ.



"ನಾವು ಹಲವು ವರ್ಷಗಳಿಂದ ಗ್ರಾಮದಲ್ಲಿ ವಾಸಿಸುತ್ತಿದ್ದೇವೆ. ಆದರೆ ಪ್ರತಿಯೊಂದು ಅಂತ್ಯಸಂಸ್ಕಾರದಲ್ಲಿ ತಪ್ಪದೆ ಭಾಗವಹಿಸುವ ನಾಯಿಯನ್ನು ಎಂದಿಗೂ ನೋಡಿಲ್ಲ. ಇದು ನಿಜಕ್ಕೂ ಆಶ್ಚರ್ಯಕರ ಸಂಗತಿ."
**– ಈರಣ್ಣ ಸಲಗಾರ ಹಾಗೂ ಮಂಜುನಾಥ ಸಂಜಿವಣ್ಣವರ, ಡಂಬಳ ಗ್ರಾಮದ ಹಿರಿಯ ನಾಗರಿಕರು.**

ನಾಯಿಯ ಈ ನಿರಂತರ ಹಾಜರಾತಿ ಗ್ರಾಮಸ್ಥರ ಕುತೂಹಲವನ್ನು ಹೆಚ್ಚಿಸಿದ್ದು, ಅಂತ್ಯಯಾತ್ರೆಯಲ್ಲಿ ಪಾಲ್ಗೊಳ್ಳುವವರು ಅದರ ವರ್ತನೆಯನ್ನು ಗಮನಿಸುತ್ತಲೇ ಸಾಗುವ ದೃಶ್ಯ ಸಾಮಾನ್ಯವಾಗಿದೆ. ಕೆಲವರು ಇದನ್ನು ಭಾವನಾತ್ಮಕವಾಗಿ ಪರಿಗಣಿಸಿ, "ಹಿಂದಿನ ಜನ್ಮದ ಬಾಂಧವ್ಯವೇ ಇರಬಹುದೇ?" ಎಂಬ ಚರ್ಚೆ ನಡೆಸುತ್ತಿದ್ದರೆ, ಇನ್ನೂ ಕೆಲವರು ಇದು ಪ್ರಾಣಿಗಳ ವಿಶೇಷ ಸಂವೇದನಾಶೀಲತೆಯ ಪ್ರತಿಫಲವಾಗಿರಬಹುದು ಎಂದು ಅಭಿಪ್ರಾಯಪಡುತ್ತಿದ್ದಾರೆ.

ಪ್ರಾಣಿಶಾಸ್ತ್ರದ ದೃಷ್ಟಿಯಿಂದ ನೋಡಿದರೆ, ನಾಯಿಗಳು ಮನುಷ್ಯರ ಭಾವನೆಗಳನ್ನು ಸೂಕ್ಷ್ಮವಾಗಿ ಗ್ರಹಿಸುವ ಸಾಮರ್ಥ್ಯ ಹೊಂದಿವೆ. ದುಃಖದ ವಾತಾವರಣ, ಜನರ ಗುಂಪು ಹಾಗೂ ನಿರಂತರ ಚಲನವಲನವನ್ನು ಅನುಸರಿಸಿ ಅವು ಹೀಗೆ ವರ್ತಿಸಬಹುದು ಎಂದು ತಜ್ಞರು ಹೇಳುತ್ತಾರೆ. ಆದರೂ ಪ್ರತಿಯೊಂದು ಅಂತ್ಯಸಂಸ್ಕಾರದಲ್ಲೂ ತಪ್ಪದೆ ಹಾಜರಾಗುತ್ತಿರುವ ಈ ನಾಯಿಯ ನಡೆ ಗ್ರಾಮದಲ್ಲಿ ವಿಶೇಷ ಚರ್ಚೆಗೆ ಕಾರಣವಾಗಿದೆ.

ಒಟ್ಟಾರೆ, ಡಂಬಳ ಗ್ರಾಮದಲ್ಲಿ ಅಂತ್ಯಯಾತ್ರೆಗಳ 'ಮೌನ ಸಂಗಾತಿ'ಯಾಗಿ ಗುರುತಿಸಿಕೊಂಡಿರುವ ಈ ಬಿಳಿ ನಾಯಿ ಈಗ ಗ್ರಾಮಸ್ಥರ ಕುತೂಹಲದ ಕೇಂದ್ರಬಿಂದುವಾಗಿದ್ದು, ಮಾನವ–ಪ್ರಾಣಿ ಬಾಂಧವ್ಯದ ಅಪರೂಪದ ಉದಾಹರಣೆಯಾಗಿ ಗಮನ ಸೆಳೆಯುತ್ತಿದೆ.

# ಸಚಿವ ಸ್ಥಾನಕ್ಕೆ 'ಪಾಟೀಲ್ ವರ್ಸಸ್ ಪಾಟೀಲ್'

▶▶ಮೊದಲನೇ ಪುಟದಿಂದ

ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಹಿರಿಯ ನಾಯಕರನ್ನು ಹೈಕಮಾಂಡ್ ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ಜಿ.ಎಸ್. ಪಾಟೀಲ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿ ಜೂನ್ 16ರಂದು ತುಮಕೂರಿನಿಂದ ಬೆಂಗಳೂರಿನವರೆಗೆ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯಿಂದ ಸಾವಿರಾರು ಕಾರ್ಯಕರ್ತರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

**ಹೈಕಮಾಂಡ್ ನಿರ್ಧಾರದತ್ತ ಜಿಲ್ಲೆಯ ಚಿತ್ತ**

ಸಚಿವ ಸ್ಥಾನಕ್ಕಾಗಿ ಜಿಲ್ಲೆಯ ಇಬ್ಬರು ಪ್ರಬಲ ನಾಯಕರ ಪರ ಕಾರ್ಯಕರ್ತರು ಕಳೆದ ಹದಿನೈದು ದಿನಗಳಿಂದ ಜಿಲ್ಲೆಯಾದ್ಯಂತ ಶಕ್ತಿ ಪ್ರದರ್ಶನ ಆರಂಭಿಸಿರುವುದು ಕಾಂಗ್ರೆಸ್ ವಲಯದಲ್ಲಿ ಕುತೂಹಲ ಮೂಡಿಸಿದೆ. ಎರಡನೇ ಹಂತದ ಸಚಿವ ಸಂಪುಟ ವಿಸ್ತರಣೆಯಲ್ಲಿ ಹೈಕಮಾಂಡ್ ಯಾರಿಗೆ ಮಣೆ ಹಾಕಲಿದೆ ಎಂಬುದು ಈಗ ಜಿಲ್ಲೆಯ ರಾಜಕೀಯದ ಕೇಂದ್ರ ಬಿಂದುವಾಗಿದೆ.

# ಐಟಿಐ ಪ್ರವೇಶಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಮುಂಡರಗಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2026–27ನೇ ಸಾಲಿನ ಐಟಿಐ ಪ್ರವೇಶಕ್ಕಾಗಿ ಪಿಪಿಪಿ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ 22 ಕೊನೆಯ ದಿನವಾಗಿದೆ.ಸಂಸ್ಥೆಯಲ್ಲಿ ಎಲೆಕ್ಟ್ರಿಷಿಯನ್, ಫಿಟ್ಟರ್, ಮೆಕ್ಯಾನಿಕ್ ಎಲೆಕ್ಟ್ರಿಕ್ ವೆಹಿಕಲ್ (MEV), ಅಡ್ವಾನ್ಸ್ಡ್ ಸಿಎನ್‌ಸಿ ಟೆಕ್ನಿಷಿಯನ್ (CNC) ಹಾಗೂ ಇಂಡಸ್ಟ್ರಿಯಲ್ ರೋಬೋಟಿಕ್ಸ್ ಮತ್ತು ಡಿಜಿಟಲ್ ಮ್ಯಾನುಫ್ಯಾಕ್ಚರಿಂಗ್ ಟೆಕ್ನಿಷಿಯನ್ (IRDM) ಕೋರ್ಸ್‌ಗಳಿಗೆ ಪ್ರವೇಶ ನೀಡಲಾಗುತ್ತಿದೆ.

ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳು ಅರ್ಜಿ ನಮೂನೆ ಪಡೆದು ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದು. ಜೂನ್ 24ರಂದು ಮೆರಿಟ್ ಆಧಾರದ ಮೇಲೆ ಆಯ್ಕೆಯಾದ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳು ಸಂಸ್ಥೆಯ ವ್ಯವಸ್ಥಾಪನಾ ಸಮಿತಿ (IMC) ನಿಗದಿಪಡಿಸುವ ಶುಲ್ಕ ಪಾವತಿಸಿ ತರಬೇತಿಗೆ ಪ್ರವೇಶ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮುಂಡರಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಕಚೇರಿಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸುವಂತೆ ಸಂಸ್ಥೆಯ ಪ್ರಾಚಾರ್ಯ ಚನ್ನಸಂಗಪ್ಪ ಕೂ. ಗಡೆದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಗೌರವಧನ ₹30 ಸಾವಿರಕ್ಕೆ ಹೆಚ್ಚಳ, ಸೇವಾ ಭದ್ರತೆ ಹಾಗೂ ಮುಂದುವರಿಕೆಗೆ ನಿರ್ದೇಶಕ ಭರತ್ ಎಸ್. ಅವರಿಗೆ ಮನವಿ**

# ಅತಿಥಿ ಉಪನ್ಯಾಸಕರಿಗೆ ನ್ಯಾಯ ನೀಡಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ವಿವಿಧ ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ ಶಿಕ್ಷಣ ಇಲಾಖೆ) ನಿರ್ದೇಶಕರಾದ ಭರತ್ ಎಸ್. ಅವರಿಗೆ ಅತಿಥಿ ಉಪನ್ಯಾಸಕರ ಪ್ರತಿನಿಧಿಗಳ ನಿಯೋಗ ಬೆಂಗಳೂರಿನಲ್ಲಿ ಮನವಿ ಸಲ್ಲಿಸಿತು.

ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಅತಿಥಿ ಉಪನ್ಯಾಸಕರ ನಿಯೋಗವು ಇಲಾಖೆಯ ನಿರ್ದೇಶಕರಾದ ಭರತ್ ಎಸ್. ಅವರನ್ನು ಭೇಟಿ ಮಾಡಿ, ಹಲವು ವರ್ಷಗಳಿಂದ ಬಾಕಿ ಉಳಿದಿರುವ ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಮಾಡಿತು. ಶಿಕ್ಷಣ ಕ್ಷೇತ್ರದಲ್ಲಿ ಮಹತ್ವದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸಮರ್ಪಕ ಗೌರವಧನ, ಸೇವಾ ಭದ್ರತೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು ಎಂದು ಒತ್ತಾಯಿಸಲಾಯಿತು.



ಪ್ರಸ್ತುತ ಅತಿಥಿ ಉಪನ್ಯಾಸಕರಿಗೆ ನೀಡಲಾಗುತ್ತಿರುವ ಮಾಸಿಕ ₹14 ಸಾವಿರ ಗೌರವಧನವು ಇಂದಿನ ಜೀವನ ನಿರ್ವಹಣಾ ವೆಚ್ಚಗಳಿಗೆ ಅನುಗುಣವಾಗಿಲ್ಲ. ಹೀಗಾಗಿ ಅದನ್ನು ಕನಿಷ್ಠ ₹30 ಸಾವಿರಕ್ಕೆ ಹೆಚ್ಚಳ ಮಾಡಬೇಕು ಎಂದು ಪ್ರತಿನಿಧಿಗಳು ಆಗ್ರಹಿಸಿದರು.

ಕಳೆದ ಹಲವು ವರ್ಷಗಳಿಂದ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆ, ಫಲಿತಾಂಶ ಸುಧಾರಣೆ ಹಾಗೂ ವಿವಿಧ ಶೈಕ್ಷಣಿಕ ಚಟುವಟಿಕೆಗಳಲ್ಲಿ ಅತಿಥಿ ಉಪನ್ಯಾಸಕರು ಮಹತ್ವದ ಪಾತ್ರ ವಹಿಸುತ್ತಿದ್ದರೂ, ಅವರಿಗೆ ತಕ್ಕಮಟ್ಟಿನ ವೇತನ ಮತ್ತು ಸೌಲಭ್ಯಗಳು ದೊರೆಯುತ್ತಿಲ್ಲ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಇದೇ ವೇಳೆ, 2025–26ನೇ ಶೈಕ್ಷಣಿಕ ವರ್ಷದಲ್ಲಿ ಸೇವೆ ಸಲ್ಲಿಸಿರುವ ಅತಿಥಿ ಉಪನ್ಯಾಸಕರನ್ನೇ 2026–27ನೇ ಶೈಕ್ಷಣಿಕ ವರ್ಷಕ್ಕೂ ಮುಂದುವರಿಸುವಂತೆ ಸರ್ಕಾರಕ್ಕೆ ಶಿಫಾರಸು ಮಾಡಬೇಕೆಂದು ನಿರ್ದೇಶಕರಾದ ಭರತ್ ಎಸ್. ಅವರಿಗೆ ಮನವಿ ಸಲ್ಲಿಸಲಾಯಿತು. ಪ್ರತಿ ವರ್ಷ ಹೊಸ ನೇಮಕಾತಿ ಪ್ರಕ್ರಿಯೆ ನಡೆಸುವುದರಿಂದ ಉಪನ್ಯಾಸಕರಲ್ಲಿ ಅನಿಶ್ಚಿತತೆ ಉಂಟಾಗುವುದಲ್ಲದೆ, ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳ ಮೇಲೂ ಪರಿಣಾಮ ಬೀರುತ್ತದೆ ಎಂದು ತಿಳಿಸಿದರು.

ರಾಜ್ಯದ ವಿವಿಧ ಭಾಗಗಳಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಶಿಕ್ಷಕರ ಕೊರತೆಯನ್ನು ನೀಗಿಸುವಲ್ಲಿ ಅತಿಥಿ ಉಪನ್ಯಾಸಕರು ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ಗ್ರಾಮೀಣ ಹಾಗೂ ಹಿಂದುಳಿದ ಪ್ರದೇಶಗಳ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವಲ್ಲಿ ಅವರ ಕೊಡುಗೆ ಅಪಾರವಾಗಿದೆ. ಆದಾಗ್ಯೂ, ಸೇವಾ ಭದ್ರತೆ ಇಲ್ಲದ ಕಾರಣ ಅನೇಕರು ಆರ್ಥಿಕ ಹಾಗೂ ಸಾಮಾಜಿಕ ಸಂಕಷ್ಟಗಳನ್ನು ಎದುರಿಸುತ್ತಿದ್ದಾರೆ ಎಂದು ಪ್ರತಿನಿಧಿಗಳು ಗಮನ ಸೆಳೆದರು.

ಸರ್ಕಾರ ಮಾನವೀಯ ಹಾಗೂ ನ್ಯಾಯಯುತ ದೃಷ್ಟಿಕೋನದಿಂದ ಸಮಸ್ಯೆಗಳನ್ನು ಪರಿಗಣಿಸಿ ಶೀಘ್ರದಲ್ಲೇ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂಬ ವಿಶ್ವಾಸವಿದೆ ಎಂದು ಪ್ರತಿನಿಧಿಗಳು ಹೇಳಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲೆಯಿಂದ ಆಗಮಿಸಿದ್ದ ಅತಿಥಿ ಉಪನ್ಯಾಸಕರು ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳ ಪ್ರತಿನಿಧಿಗಳು, ಸಂಘದ ಪದಾಧಿಕಾರಿಗಳು ಹಾಗೂ ಶಿಕ್ಷಣ ಕ್ಷೇತ್ರದ ಮುಖಂಡರು ಉಪಸ್ಥಿತರಿದ್ದರು.

# ಜೂ.17ರಂದು ಪೂರ್ವಭಾವಿ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರದ ಗ್ರಾಮ ದೇವತೆಗಳಾದ ದ್ಯಾಮಮ್ಮ ಹಾಗೂ ದುರ್ಗಮ್ಮ ದೇವಿಯರ ಹರಿಜಾತ್ರೆ ಹಿನ್ನೆಲೆಯಲ್ಲಿ ಪೂರ್ವಭಾವಿ ಸಭೆಯನ್ನು ಜೂನ್ 17ರಂದು ಬುಧವಾರ ಸಂಜೆ 6 ಗಂಟೆಗೆ ನಗರದ ಒಕ್ಕಲಗೇರಿ ಓಣಿಯ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಆಯೋಜಿಸಲಾಗಿದೆ.

ಪ್ರತಿ 12 ವರ್ಷಗಳಿಗೊಮ್ಮೆ ನಡೆಯುವ ಈ ಐತಿಹಾಸಿಕ ಹಾಗೂ ಧಾರ್ಮಿಕ ಮಹೋತ್ಸವದ ಅಂಗವಾಗಿ ಆಗಸ್ಟ್ ತಿಂಗಳಲ್ಲಿ ಜರುಗಲಿರುವ ಹರಿಜಾತ್ರೆಯ ಸಿದ್ಧತೆ ಕುರಿತು ಸಭೆಯಲ್ಲಿ ಚರ್ಚೆ ನಡೆಯಲಿದ್ದು, ವಿವಿಧ ಸಮಿತಿಗಳ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗುವುದು.

ಹರಿಜಾತ್ರೆಯ ಯಶಸ್ವಿ ಆಯೋಜನೆಗಾಗಿ ಭಕ್ತಾದಿಗಳು ಹಾಗೂ ಸಾರ್ವಜನಿಕರಿಂದ ಸಲಹೆ-ಸೂಚನೆಗಳನ್ನು ಸ್ವೀಕರಿಸಲಾಗುವುದು. ಆದ್ದರಿಂದ ಗದಗ-ಬೆಟಗೇರಿ ನಗರದ ಸರ್ವ ಭಕ್ತರು, ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸಭೆಯಲ್ಲಿ ಭಾಗವಹಿಸಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳುವಂತೆ ಟ್ರಸ್ಟ್ ಕಮಿಟಿ ಅಧ್ಯಕ್ಷ ಕೊಟ್ರಪ್ಪ ಕಮತರ ಮನವಿ ಮಾಡಿದ್ದಾರೆ.

# ಇಂದು ಪ್ರತಿಭಾ ಪುರಸ್ಕಾರ ಸಮಾರಂಭ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಶಿಗ್ಲಿ ಗ್ರಾಮದಲ್ಲಿ ವೀರರಾಣಿ ಕಿತ್ತೂರ ಚನ್ನಮ್ಮ ವಿವಿಧೋದ್ದೇಶಗಳ ಸಂಘ (ರಿ) ವತಿಯಿಂದ ಜೂನ್ 14ರಂದು ಸಂಜೆ 5 ಗಂಟೆಗೆ ಗ್ರಾಮದ ಶಾಖಾಂಬರಿ ಸಮುದಾಯ ಭವನದಲ್ಲಿ ಪ್ರತಿಭಾ ಪುರಸ್ಕಾರ ಹಾಗೂ ಪಂಚಮಸಾಲಿ ಸಮಾಜದ ನೌಕರರ ಸಂಘ ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ಹೂವಿನಶಿಗ್ಲಿಯ ಶ್ರೀ ಚನ್ನವೀರ ಮಹಾಸ್ವಾಮಿಗಳು ವಹಿಸಲಿದ್ದು, ಪಂಚಮಸಾಲಿ ಸಮಾಜದ ಶಿಗ್ಲಿ ಗ್ರಾಮ ಘಟಕದ ಅಧ್ಯಕ್ಷ ಶಂಕರ ಎಂ. ರಾಗಿ ಅಧ್ಯಕ್ಷತೆ ವಹಿಸಲಿದ್ದಾರೆ.

ಜಿಲ್ಲಾಧ್ಯಕ್ಷ ಈರಣ್ಣ ಕರಿಬಿಷ್ಠಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಅತಿಥಿಗಳಾಗಿ ಜಿಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ರಾಜ್ಯ ಸಂಘಟನೆಯ ಎಸ್.ಬಿ. ಡಾಣಗಲ್, ತಾಲೂಕು ಅಧ್ಯಕ್ಷ ಮಂಜುನಾಥ ಮಾಗಡಿ, ಬಸವರಾಜ ತುಳಿ, ಡಿ.ವೈ. ಹುನಗುಂದ, ಶಿವಪ್ಪ ಕೆಸರಳ್ಳಿ ಸೇರಿದಂತೆ ಸಮಾಜದ ಹಿರಿಯರು ಭಾಗವಹಿಸಲಿದ್ದಾರೆ.

ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಸಾಧನೆ ಮಾಡಿದ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು. ಜೊತೆಗೆ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧಕರನ್ನು ಸನ್ಮಾನಿಸಲಾಗುವುದು ಎಂದು ಗ್ರಾಮ ಘಟಕದ ಪ್ರಕಟಣೆ ತಿಳಿಸಿದೆ.

**ಬಿಂಕದಕಟ್ಟಿ ಹೈಟೆಕ್ ಸಸ್ಯ ಕ್ಷೇತ್ರದಲ್ಲಿ ವಿವಿಧ ಜಾತಿಯ ಸಸಿಗಳ ಮಹಾಸಂಗ್ರಹ; ರೈತರಿಗೆ ಸಬ್ಸಿಡಿ ದರದಲ್ಲಿ, ಹಕ್ಕುಪತ್ರ ಪಡೆದ ರೈತರಿಗೆ ಉಚಿತ ವಿತರಣೆ**

# ಗದಗ ಹಸಿರೀಕರಣಕ್ಕೆ 30 ಸಾವಿರ ಸಸಿಗಳು ಸಜ್ಜು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನಲ್ಲಿ ಹಸಿರು ಪರಿಸರ ನಿರ್ಮಾಣದ ಮಹತ್ವಾಕಾಂಕ್ಷಿ ಗುರಿಯೊಂದಿಗೆ ಗದಗ ಸಾಮಾಜಿಕ ಅರಣ್ಯ ವಲಯ ವ್ಯಾಪ್ತಿಯ ಬಿಂಕದಕಟ್ಟಿ ಹೈಟೆಕ್ ಸಸ್ಯ ಕ್ಷೇತ್ರ ಬರೋಬ್ಬರಿ 30 ಸಾವಿರ ವಿವಿಧ ಜಾತಿಯ ಸಸಿಗಳೊಂದಿಗೆ ಸಜ್ಜಾಗಿ ನಿಂತಿದೆ. ಸಾಮಾಜಿಕ ಅರಣ್ಯ ವಲಯದ ಆರ್.ಎಸ್.ಪಿ.ಡಿ. ಯೋಜನೆಯಡಿ ರೈತರಿಗೆ ಸಹಾಯಧನದ ರೂಪದಲ್ಲಿ ಸಸಿಗಳನ್ನು ವಿತರಿಸಲಾಗುತ್ತಿದ್ದು, ಆಸಕ್ತ ರೈತರು ಹಾಗೂ ಪರಿಸರ ಪ್ರೇಮಿಗಳು ಸಸ್ಯ ಕ್ಷೇತ್ರಕ್ಕೆ ಭೇಟಿ ನೀಡಿ ಸಸಿಗಳನ್ನು ಪಡೆದು ಅವುಗಳ ಸರ್ವತೋಮುಖ ಬೆಳವಣಿಗೆಗೆ ಶ್ರಮಿಸಿ ಹಸಿರು ಸಮುದಾಯ ನಿರ್ಮಾಣಕ್ಕೆ ಕೈಜೋಡಿಸುವಂತೆ ಅರಣ್ಯ ಇಲಾಖೆ ಕರೆ ನೀಡಿದೆ.

ಧಾರವಾಡ ಬೀಜ ಅಭಿವೃದ್ಧಿ ಘಟಕದಿಂದ ಬೀಜಗಳನ್ನು ಪಡೆದು ಸಸ್ಯ ಕ್ಷೇತ್ರದಲ್ಲಿ ಬೀಜ ಬಿತ್ತನೆ ಮಾಡಿ, ಒಂದು ವರ್ಷದವರೆಗೆ ಪೋಷಣೆ ಮಾಡಿ ನಂತರ ಸಸಿಗಳನ್ನು ವಿತರಿಸಲಾಗುತ್ತಿದೆ.

ಬಿಂಕದಕಟ್ಟಿ ಸಸ್ಯ ಕ್ಷೇತ್ರದಲ್ಲಿ ಮಹಾಗನಿ, ಶ್ರೀಗಂಧ, ದಾಂಡೇಲಿ ತೇಗ, ಬಿದಿರು, ರಕ್ತಚಂದನ, ಇಲಾಚಿ (ಸಿಹಿ ಹುಣಸೆ), ನೇರಳೆ, ಹೆಬ್ಬೇವು, ನೆಲ್ಲಿ, ಬೇವು, ಕರಿಬೇವು, ಚತುರ್ಮುಖ, ಸಂಪಿಗೆ, ಬಂಗಾಳಿ, ಗಜಗ, ಕಬೂಬಿಯ, ಶಿವನಿ, ಹೊಳೆಮತ್ತಿ, ಚರಿ, ಬಳುಲ, ಹೊಂಗೆ, ಪೇರಲ್, ಮಾವು, ಲಿಂಬಿ, ಸೀತಾಫಲ, ಅರಳಿ, ಬಸರಿ, ಬಸವನಪಾದ, ಆಕಾಶ ಮಲ್ಲಿಗೆ, ಜವಾನಿಕಾ, ಕಾಡು ಬಾದಾಮಿ, ತಪಸ್, ಅತ್ತಿ, ಚಳ್ಳ, ಗುಲ್ಮೊಹರ್, ಸಿರಸಲ್, ರೇನ್ ಟ್ರೀ ಸೇರಿದಂತೆ ವಿವಿಧ ಜಾತಿಯ ಸಸಿಗಳು ಲಭ್ಯವಿವೆ.

ವಿವಿಧ ಬಗೆಯ ಸಸಿ ತಳಿಗಳಿಗೆ ಹೆಸರುವಾಸಿಯಾಗಿರುವ ಬಿಂಕದಕಟ್ಟಿ ಹೈಟೆಕ್ ಸಸ್ಯ ಕ್ಷೇತ್ರದಲ್ಲಿ ಎಲ್ಲ ತಳಿ ಸಸ್ಯಗಳೂ ಲಭ್ಯವಿದ್ದು, ಬೇಸಿಗೆ ಕಾಲದಲ್ಲಿ ಅಗತ್ಯ ಬೀಜಗಳನ್ನು ಗದಗ ಜಿಲ್ಲೆಯಾದ್ಯಂತ ಸಂಚರಿಸಿ ಸಂಗ್ರಹಿಸಲಾಗುತ್ತದೆ. ಸಿಗದ ಬೀಜಗಳನ್ನು ಹೊರ ಜಿಲ್ಲೆಗಳಿಂದ ತರಿಸಲಾಗುತ್ತದೆ. ಶ್ರೀಗಂಧ, ಕಬೂಬಿಯ, ನುಗ್ಗಿ ಹಾಗೂ ಹೆಬ್ಬೇವು ಬೀಜಗಳನ್ನು ದಾವಣಗೆರೆ, ಶಿವಮೊಗ್ಗ ಹಾಗೂ ಮೈಸೂರು ಜಿಲ್ಲೆಗಳಿಂದ ತರಿಸಿ ಬೆಳೆಸಲಾಗುತ್ತಿದೆ.

ಬೀಜದಿಂದ ಬೆಳೆಸಿದ ಸಸಿಗಳನ್ನು ಒಂದು ವರ್ಷದ ಬಳಿಕ ರೈತರಿಗೆ ವಿತರಿಸಲಾಗುತ್ತದೆ. ಗದಗ ತಾಲೂಕು ಸಾಮಾಜಿಕ ಅರಣ್ಯ ವಲಯವು ರೈತರಿಗೆ ಸಹಾಯಧನದ ರೂಪದಲ್ಲಿ ಸಸಿಗಳನ್ನು ವಿತರಿಸಲು ಮುಂದಾಗಿದ್ದು, 30 ಸಾವಿರ ಸಸಿಗಳ ವಿತರಣೆಯ ಗುರಿ ಹೊಂದಿದೆ.

ಸಸಿಗಳ ಗಾತ್ರಕ್ಕೆ ಅನುಗುಣವಾಗಿ ರೈತರು ಹಣ ಪಾವತಿಸಬೇಕಿದ್ದು, ಸಣ್ಣ ಸಸಿಗೆ 3 ರೂ. ಹಾಗೂ ದೊಡ್ಡ ಸಸಿಗೆ 6 ರೂ. ನಿಗದಿಪಡಿಸಲಾಗಿದೆ. ಇದೇ ಸಸಿಗಳಿಗೆ ಮಾರುಕಟ್ಟೆಯಲ್ಲಿ 20 ರೂ.ದಿಂದ 33 ರೂ. ವರೆಗೆ ಬೆಲೆ ಇದೆ.

ಸಬ್ಸಿಡಿ ಯೋಜನೆಯಡಿ ಸಸಿಗಳನ್ನು ಪಡೆಯಲು ರೈತರು ಆರ್.ಟಿ.ಸಿ. ಉತಾರ, ಆಧಾರ್ ಕಾರ್ಡ್ ಹಾಗೂ ಭಾವಚಿತ್ರದೊಂದಿಗೆ ಬಿಂಕದಕಟ್ಟಿ ಸಸ್ಯ ಕ್ಷೇತ್ರವನ್ನು ಸಂಪರ್ಕಿಸಬಹುದಾಗಿದೆ.

24 ಕಿ.ಮೀ. ರಸ್ತೆ ಬದಿಯಲ್ಲಿ ಸಸಿ ನೆಡುವ ಯೋಜನೆ

ಗದಗ ತಾಲೂಕು ವ್ಯಾಪ್ತಿಯಲ್ಲಿ ರಸ್ತೆ ಬದಿಯಲ್ಲಿ ಸುಮಾರು 24 ಕಿಲೋಮೀಟರ್ ಉದ್ದದವರೆಗೆ ಸಸಿ ನೆಡುವ ಯೋಜನೆ ರೂಪಿಸಲಾಗಿದ್ದು, ಈ ಕಾರ್ಯಕ್ಕೆ ಗುತ್ತಿಗೆ ನೀಡಲಾಗುತ್ತದೆ. ಗುತ್ತಿಗೆದಾರರು ಸಸಿ ನೆಡುವುದು, ಒಂದು ವರ್ಷದವರೆಗೆ ರಕ್ಷಣೆ, ನೀರುಣಿಸುವುದು ಹಾಗೂ ಪೋಷಣೆ ಮಾಡುವ ಜವಾಬ್ದಾರಿ ವಹಿಸಿಕೊಳ್ಳಲಿದ್ದಾರೆ.



> “ರೈತರು ಮತ್ತು ಪರಿಸರ ಪ್ರೇಮಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸಸಿಗಳನ್ನು ನೆಟ್ಟು ಗದಗ ತಾಲೂಕಿನಾದ್ಯಂತ ಹಸಿರು ಪರಿಸರ ನಿರ್ಮಾಣಕ್ಕೆ ಕೈಜೋಡಿಸಬೇಕು. ಗದಗ ಹಸಿರೀಕರಣ ಅಭಿಯಾನವನ್ನು ಜನಸಹಭಾಗಿತ್ವದ ಮೂಲಕ ಯಶಸ್ವಿಗೊಳಿಸೋಣ.”
>
> **– ನಮನ ನಾಯ್ಕ, ವಲಯ ಅರಣ್ಯಾಧಿಕಾರಿ, ಸಾಮಾಜಿಕ ಅರಣ್ಯ ವಲಯ, ಗದಗ**



**ಹಕ್ಕುಪತ್ರ ಪಡೆದ ರೈತರಿಗೆ 3,500 ಸಸಿಗಳು ಉಚಿತ**

ಕಬಲಾಯತಕಟ್ಟಿ ತಾಂಡಾ ಸೇರಿದಂತೆ ಅರಣ್ಯ ವ್ಯಾಪ್ತಿಯಲ್ಲಿ ಸಾಗುವಳಿ ಮಾಡುವ ಹಕ್ಕುಪತ್ರಗಳನ್ನು ಪಡೆದ ರೈತರಿಗೆ ಕೇಂದ್ರ ಸರ್ಕಾರದ ಯೋಜನೆಯಡಿ 3,500 ಸಸಿಗಳನ್ನು ಉಚಿತವಾಗಿ ವಿತರಿಸಲಾಗುವುದು.

ಮಾನ್ಸೂನ್ ಮಳೆಗಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ರೈತರಿಗೆ 30 ಸಾವಿರ ಸಸಿಗಳನ್ನು ವಿತರಿಸುವ ಗುರಿ ಹೊಂದಲಾಗಿದೆ. ಮಳೆಗಾಲದಲ್ಲಿ ಸಸಿ ನೆಟ್ಟರೆ ಕಡಿಮೆ ಶ್ರಮದಲ್ಲಿ ಉತ್ತಮ ಬೆಳವಣಿಗೆ ಸಾಧಿಸಿ, ಗದಗ ತಾಲೂಕನ್ನು ಹಸಿರೀಕರಣಗೊಳಿಸಲು ಸಾಧ್ಯವಾಗಲಿದೆ ಎಂದು ಇಲಾಖೆ ತಿಳಿಸಿದೆ.

**ಜಕ್ಕಲಿ ಶಾಲೆಯಲ್ಲಿ ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನಾಚರಣೆ**

# ಮಕ್ಕಳ ಹಕ್ಕುಗಳ ರಕ್ಷಣೆಗೆ ಪ್ರತಿಜ್ಞೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನಾಚರಣೆ ಅಂಗವಾಗಿ ಸಮೀಪದ ಜಕ್ಕಲಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಸಂಕೀರ್ಣದಲ್ಲಿ ಶುಕ್ರವಾರ ಜಾಗೃತಿ ಕಾರ್ಯಕ್ರಮ ಆಯೋಜಿಸಿ, ವಿದ್ಯಾರ್ಥಿಗಳಿಗೆ ಬಾಲ ಕಾರ್ಮಿಕತೆ ನಿರ್ಮೂಲನೆ ಕುರಿತು ಅರಿವು ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಬಾಲ ಕಾರ್ಮಿಕತೆ ವಿರುದ್ಧ ಪ್ರತಿಜ್ಞಾವಿಧಿ ಬೋಧಿಸಿ, ಮಕ್ಕಳ ಹಕ್ಕುಗಳು, ಶಿಕ್ಷಣದ ಮಹತ್ವ ಹಾಗೂ ಸುರಕ್ಷಿತ ಬಾಲ್ಯದ ಅಗತ್ಯತೆಯ ಕುರಿತು ಮಾಹಿತಿ ನೀಡಲಾಯಿತು.

ಕೆ.ಜಿ.ಎಸ್. ಶಾಲೆಯ ಮುಖ್ಯ ಶಿಕ್ಷಕ ಎಸ್.ಬಿ. ಗವಿ ಮಾತನಾಡಿ, ಪ್ರತಿಯೊಬ್ಬ ಮಗುವಿಗೂ ಶಿಕ್ಷಣ, ಆರೋಗ್ಯ ಮತ್ತು ಸುರಕ್ಷಿತ ಬಾಲ್ಯದ ಹಕ್ಕು ಇದೆ. ಯಾವುದೇ ಮಗುವನ್ನು ದುಡಿಮೆಗೆ ತೊಡಗಿಸುವುದು ಕಾನೂನುಬಾಹಿರವಾಗಿದ್ದು, ಬಾಲ ಕಾರ್ಮಿಕತೆ ನಿರ್ಮೂಲನೆಗೆ ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಹೇಳಿದರು.



ಬಾಲ ಕಾರ್ಮಿಕತೆ, ಬಾಲ್ಯ ವಿವಾಹ, ಮಕ್ಕಳ ಮೇಲಿನ ದೌರ್ಜನ್ಯ ಹಾಗೂ ಮಕ್ಕಳ ಹಕ್ಕುಗಳ ಉಲ್ಲಂಘನೆ ಕಂಡುಬಂದಲ್ಲಿ ಸಮೀಪದ ಅಂಗನವಾಡಿ ಕೇಂದ್ರ, ಶಾಲೆ ಅಥವಾ ಮಕ್ಕಳ ಸಹಾಯವಾಣಿ 1098ಕ್ಕೆ ಮಾಹಿತಿ ನೀಡುವ ಮೂಲಕ ಮಕ್ಕಳ ರಕ್ಷಣೆಗೆ ಮುಂದಾಗಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಗಂಡು ಮಕ್ಕಳ ಶಾಲೆಯ ಮುಖ್ಯ ಶಿಕ್ಷಕ ಎಚ್.ಎಸ್. ಬಿಂಗಿ ಮಾತನಾಡಿ, ಬಾಲ ಕಾರ್ಮಿಕತೆ ಸಮಾಜದ ಅಭಿವೃದ್ಧಿಗೆ ಮಾರಕವಾಗಿದ್ದು, ಪ್ರತಿಯೊಬ್ಬರೂ ಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಸಹಕರಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಅಂದಪ್ಪ ಮಾದರ, ವೀರಪ್ಪ ಮುಕ್ಕಣ್ಣವರ, ಶಿಕ್ಷಕರಾದ ಎಂ.ವಿ. ತಾಳಿಕೋಟಿ, ಎ.ಪಿ. ಶೆಟ್ಟರ, ಸಿ.ಎಸ್. ಬೆಳ್ಳಟ್ಟಿ, ಎಸ್.ಎ. ಪಲ್ಲೇದ, ಪಿ.ಜಿ. ಹುಯಿಲಗೋಳ, ಎಸ್.ಎಸ್. ಯಲ್ಲರಡ್ಡಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮವು ಮಕ್ಕಳ ಹಕ್ಕುಗಳ ರಕ್ಷಣೆ ಮತ್ತು ಬಾಲ ಕಾರ್ಮಿಕತೆ ನಿರ್ಮೂಲನೆ ಕುರಿತು ಜಾಗೃತಿ ಮೂಡಿಸುವಲ್ಲಿ ಯಶಸ್ವಿಯಾಯಿತು.

> “ಪ್ರತಿಯೊಬ್ಬ ಮಗುವಿಗೂ ಶಿಕ್ಷಣ ಪಡೆಯುವ ಹಕ್ಕಿದೆ. ಬಾಲ ಕಾರ್ಮಿಕತೆ ನಿರ್ಮೂಲನೆಗೆ ಸಮಾಜದ ಎಲ್ಲ ವರ್ಗದವರ ಸಹಕಾರ ಅಗತ್ಯ.”
>
> **– ಎಸ್.ಬಿ. ಗವಿ, ಮುಖ್ಯ ಶಿಕ್ಷಕರು**

**ರಾಜ್ಯ ಮಟ್ಟದ ಚಾಂಪಿಯನ್‌ಶಿಪ್‌ನಲ್ಲಿ ಹಲವು ವಿಭಾಗಗಳಲ್ಲಿ ಪ್ರಶಸ್ತಿ; ಜಿಲ್ಲೆಯ ಕೀರ್ತಿ ಹೆಚ್ಚಿಸಿದ ಕ್ರೀಡಾಪಟುಗಳು**

# ಗದಗದ ಯೋಗಪಟುಗಳ ರಾಜ್ಯಮಟ್ಟದ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ತಪೋವನದಲ್ಲಿ ನಡೆದ ಕರ್ನಾಟಕ ರಾಜ್ಯ ಯೋಗಾಸನ ಚಾಂಪಿಯನ್‌ಶಿಪ್ ಸ್ಪರ್ಧೆಗಳಲ್ಲಿ ಗದಗ ಜಿಲ್ಲಾ ಯೋಗಾಸನ ಕ್ರೀಡಾ ತಂಡದ ಸದಸ್ಯರು ಉತ್ತಮ ಸಾಧನೆ ಮಾಡಿ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಶನ್ (ರಿ) ಬೆಂಗಳೂರು, ಉತ್ತರ ಕನ್ನಡ ಜಿಲ್ಲಾ ಯೋಗ ಫೆಡರೇಶನ್ (ರಿ) ಶಿರಸಿ ಹಾಗೂ ಯಲ್ಲಾಪುರ ತಾಲೂಕು ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ (ರಿ) ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಸ್ಪರ್ಧೆಯಲ್ಲಿ ಗದಗ ಜಿಲ್ಲೆಯ ಕ್ರೀಡಾಪಟುಗಳು ವಿವಿಧ ವಯೋಮಿತಿ ವಿಭಾಗಗಳಲ್ಲಿ ಪ್ರಶಸ್ತಿ ಪಡೆದರು.




10-12 ವರ್ಷದ ಬಾಲಕರ ವಿಭಾಗದಲ್ಲಿ ಮಲ್ಲಿಕಾರ್ಜುನ ಅಳಗವಾಡಿ, 16-18 ವರ್ಷದ ಬಾಲಕಿಯರ ವಿಭಾಗದಲ್ಲಿ ನಮ್ರತಾ ವೆರ್ಣೇಕರ, 18-21 ವರ್ಷದ ವಿಭಾಗದಲ್ಲಿ ಪ್ರಶಾಂತ ಗಾಣಿಗೇರ ಹಾಗೂ ಸುಷ್ಮಿತಾ ಮಾರನವಬಸರಿ, 35-45 ವರ್ಷದ ಮಹಿಳೆಯರ ವಿಭಾಗದಲ್ಲಿ ಚೈತ್ರಾ ಸೋಮನಗೌಡ್ರ ವಿಶೇಷ ಸ್ಥಾನ ಪಡೆದು ಗಮನ ಸೆಳೆದರು. ಗದಗ ಜಿಲ್ಲೆಯಿಂದ ನಿರ್ಣಾಯಕರಾಗಿ ಚೇತನ ಚುಂಚಾ, ಸುಮಂಗಲಾ ಹದ್ಲಿ ಹಾಗೂ ಅನುರಾಧಾ ಶಿರಿಯಣ್ಣವರ ಕಾರ್ಯನಿರ್ವಹಿಸಿದರು. ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಶನ್‌ನ ಕಾರ್ಯಕಾರಿ ಮಂಡಳಿ ಸದಸ್ಯ ಕೆ.ಎಸ್. ಪಲ್ಲೇದ ಸಹ ಸ್ಪರ್ಧೆಯಲ್ಲಿ ಭಾಗವಹಿಸಿ ಉತ್ತಮ ಸೇವೆ ಸಲ್ಲಿಸಿದರು.

ಇದಲ್ಲದೆ, ಗದಗ ಜಿಲ್ಲೆಯ ಎಸ್.ವೈ.ಬಿ.ಎಂ.ಎಸ್. ಯೋಗಪಾಠಶಾಲೆ ಹಾಗೂ ನಿತ್ಯಂ ಯೋಗ ಕೇಂದ್ರ ತಂಡ ಪ್ರಶಸ್ತಿಯನ್ನು ಪಡೆದು ಜಿಲ್ಲೆಗೆ ಮತ್ತೊಂದು ಗೌರವ ತಂದುಕೊಟ್ಟಿವೆ.

ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಸಾಧನೆ ಮಾಡಿದ ಕ್ರೀಡಾಪಟುಗಳು, ತರಬೇತುದಾರರು, ಪಾಲಕರು ಹಾಗೂ ಸಹಕರಿಸಿದ ಎಲ್ಲರಿಗೂ ಗದಗ ಜಿಲ್ಲಾ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಶನ್ ಅಧ್ಯಕ್ಷ ಕೆ.ಎಸ್. ಪಲ್ಲೇದ ಮತ್ತು ಕಾರ್ಯದರ್ಶಿ ಚೇತನ ಚುಂಚಾ ಅಭಿನಂದನೆ ಸಲ್ಲಿಸಿದ್ದಾರೆ.

# ಮಹಿಳಾ ಸಬಲೀಕರಣವೇ ಗ್ರಾಮ ಸ್ವರಾಜ್ಯದ ಬುನಾದಿ

▸▸ಮೊದಲನೇ ಪುಟದಿಂದ

ಗದಗ ತಾಲೂಕಿನ ತಿಮ್ಮಾಪೂರ ಗ್ರಾಮದ ಶ್ರೀ ಕರಿಯಮ್ಮದೇವಿ ಸಮುದಾಯ ಭವನದಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ವತಿಯಿಂದ ಆಯೋಜಿಸಿದ್ದ “ಮಹಿಳೆಯರ ಒಗ್ಗೂಡಿಸುವಿಕೆ ಹಾಗೂ ಗ್ರಾಮದ ಹಿರಿಯರ ಸಭೆ” ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

1993ರ 73ನೇ ಸಂವಿಧಾನ ತಿದ್ದುಪಡಿಯ ಆಶಯಗಳು ಗ್ರಾಮದ ಬಾಗಿಲಿಗೆ ತಲುಪಬೇಕು. ಮಹಿಳೆಯರು ಸ್ವಸಹಾಯ ಸಂಘಗಳ ಮೂಲಕ ಆರ್ಥಿಕವಾಗಿ ಸಬಲರಾಗಿ ಗ್ರಾಮಾಭಿವೃದ್ಧಿಯ ಮುಂಚೂಣಿಯಲ್ಲಿ ನಿಲ್ಲಬೇಕು ಎಂದು ಕರೆ ನೀಡಿದರು.

ಗೃಹಲಕ್ಷ್ಮಿ ಯೋಜನೆಯಿಂದ ದೊರೆಯುವ ಹಣದಲ್ಲಿ ಪ್ರತಿ ಮಹಿಳೆಯೂ ₹100 ಉಳಿಸಿ ಗ್ರಾಮದ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳ ಶಿಕ್ಷಣಕ್ಕೆ ನೆರವಾಗಬೇಕು. ದುಂದು ವೆಚ್ಚದ ಮದುವೆಗಳಿಗೆ ಕಡಿವಾಣ ಹಾಕಿ ಸಾಮೂಹಿಕ ವಿವಾಹಗಳನ್ನು ಉತ್ತೇಜಿಸುವ ಮೂಲಕ ಹಣ ಮತ್ತು ಸಮಯ ಉಳಿತಾಯ ಮಾಡಬಹುದು ಎಂದು ಸಲಹೆ ನೀಡಿದರು.

ತಿಂಗಳಲ್ಲಿ ಒಂದು ದಿನ ಮಹಿಳೆಯರು, ಹಿರಿಯರು ಹಾಗೂ ಯುವಕರು ಸೇರಿ ಶ್ರಮದಾನ ಮಾಡುವ ಮೂಲಕ ಗ್ರಾಮವನ್ನು ಸ್ವಚ್ಛ ಹಾಗೂ ಮಾದರಿ ಗ್ರಾಮವನ್ನಾಗಿ ರೂಪಿಸಬಹುದು ಎಂದರು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎಚ್.ಎಸ್. ಜಿನಗಾ ಮಾತನಾಡಿ, ಗ್ರಾಮ ಸಭೆಗಳಲ್ಲಿ ಮಹಿಳೆಯರು ಹಾಗೂ ಹಿರಿಯರು ಕಡ್ಡಾಯವಾಗಿ ಭಾಗವಹಿಸಿ ತಮ್ಮ ಗ್ರಾಮದ ಅಭಿವೃದ್ಧಿಗೆ ಅಗತ್ಯ ಪ್ರಸ್ತಾವನೆಗಳನ್ನು ಸಲ್ಲಿಸಬೇಕು. ಜನರ ಅಗತ್ಯಗಳಿಗೆ ಅನುಗುಣವಾಗಿ ಯೋಜನೆಗಳನ್ನು ರೂಪಿಸಿದಾಗ ಮಾತ್ರ ನಿಜವಾದ ಅಭಿವೃದ್ಧಿ ಸಾಧ್ಯ ಎಂದು ಹೇಳಿದರು.

ರೈತ ಸಂಘದ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ಮಾತನಾಡಿ, ಗ್ರಾಮ ಸಭೆಗಳನ್ನು ನಿಯಮಿತವಾಗಿ ನಡೆಸಿ ಜನರ ಸಮಸ್ಯೆಗಳ ಕುರಿತು ಚರ್ಚಿಸಿ ಕ್ರಿಯಾ ಯೋಜನೆ ರೂಪಿಸಿ ಸರ್ಕಾರದ ಅನುಮೋದನೆಯೊಂದಿಗೆ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹರ್ಲಾಪೂರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರೇಣುಕಾ ವಡ್ಡರ ವಹಿಸಿದ್ದರು.

ಈ ಸಂದರ್ಭದಲ್ಲಿ ಗುರಣ್ಣ ಬಳಗಾನೂರ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ವಾಸಣ್ಣ ಕುರುಡಗಿ, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಕೃಷ್ಣೇಗೌಡ ಕೆ. ಪಾಟೀಲ್, ಪಿಡಿಒ ಅಶ್ವಿನಿ ಕುರುಡಗಿ, ಎಸ್.ಬಿ. ಸತ್ಯಪ್ಪನವರ ಸೇರಿದಂತೆ ನೂರಾರು ಮಹಿಳೆಯರು, ಹಿರಿಯರು, ರೈತರು ಹಾಗೂ ಯುವಕರು ಭಾಗವಹಿಸಿದ್ದರು.

**ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ 2026-31ರ ಅವಧಿಗೆ ಅವಿರೋಧ ಆಯ್ಕೆ**


# ಉಪನ್ಯಾಸಕರ ವಿಶ್ವಾಸ ಗೆದ್ದ ಸೋಮಣ್ಣವರ ತಂಡ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ವಿಶ್ವಾಸವನ್ನು ಮತ್ತೊಮ್ಮೆ ಗಳಿಸಿರುವ ಎಸ್.ಎಸ್. ಸೋಮಣ್ಣವರ ನೇತೃತ್ವದ ತಂಡ, ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಗದಗ ಜಿಲ್ಲಾ ಘಟಕದ 2026-31ನೇ ಸಾಲಿನ ಅವಧಿಗೆ ನಡೆದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಿದೆ.

ಜೂನ್ 2ರಂದು ನಡೆದ ಚುನಾವಣೆಯಲ್ಲಿ ಎಲ್ಲಾ ಹುದ್ದೆಗಳಿಗೂ ಅವಿರೋಧ ಆಯ್ಕೆ ನಡೆದಿದ್ದು, ಈ ಕುರಿತು ಜಿಲ್ಲಾ ಚುನಾವಣಾಧಿಕಾರಿ ಎಸ್.ಎಸ್. ಚವಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಅಧ್ಯಕ್ಷರಾಗಿ ಹಾಲಿ ಅಧ್ಯಕ್ಷ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜು, ಮಾಗಡಿ ಪ್ರಭಾರಿ ಪ್ರಾಚಾರ್ಯ ಎಸ್.ಎಸ್. ಸೋಮಣ್ಣವರ ಆಯ್ಕೆಯಾಗಿದ್ದಾರೆ.



ಇತರ ಪದಾಧಿಕಾರಿಗಳಾಗಿ ಜಿಲ್ಲಾ ಕಾರ್ಯಾಧ್ಯಕ್ಷರಾಗಿ ಎಂ.ಎಸ್. ಕೊಕ್ಕರಗುಂದಿ (ಸರ್ಕಾರಿ ಪದವಿ ಪೂರ್ವ ಕಾಲೇಜು, ಲಕ್ಷ್ಮೇಶ್ವರ), ಜಿಲ್ಲಾ ಉಪಾಧ್ಯಕ್ಷೆ (ಮಹಿಳಾ ಮೀಸಲು)ಯಾಗಿ ಅಮನ್ ಗುಳೇದಗುಡ್ಡ (ಮುನ್ಸಿಪಲ್ ಪದವಿ ಪೂರ್ವ ಕಾಲೇಜು, ಗದಗ), ಜಿಲ್ಲಾ ಖಜಾಂಚಿಯಾಗಿ ಎಂ.ಪಿ. ಕುಲಕರ್ಣಿ (ಸರ್ಕಾರಿ ಪದವಿ ಪೂರ್ವ ಕಾಲೇಜು, ನರಗುಂದ), ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಎಫ್.ಎಸ್. ಬೆಳವಗಿ (ಎಸ್.ಎಚ್.ಎಸ್. ಪದವಿ ಪೂರ್ವ ಕಾಲೇಜು, ಪೇಠಾಲೂರ), ಜಿಲ್ಲಾ ಪ್ರಧಾನ ಸಂಘಟನಾ ಕಾರ್ಯದರ್ಶಿಯಾಗಿ ಹನಮರೆಡ್ಡಿ (ಎನ್.ಎಫ್.ಎಂ.ಡಬಾಲಿ ಪದವಿ ಪೂರ್ವ ಕಾಲೇಜು, ಶಿರಹಟ್ಟಿ), ಜಿಲ್ಲಾ ಕಾರ್ಯದರ್ಶಿಯಾಗಿ ಎನ್.ಟಿ. ಮಳೋದೆ (ಸರ್ಕಾರಿ ಪದವಿ ಪೂರ್ವ ಕಾಲೇಜು, ನಿಡಗುಂದಿ), ಜಿಲ್ಲಾ ಜಂಟಿ ಕಾರ್ಯದರ್ಶಿಯಾಗಿ ಎಸ್.ಎಸ್. ನರಗುಂದ (ಪ್ರಾಚಾರ್ಯರು, ಎಸ್.ವಿ. ಪದವಿ ಪೂರ್ವ ಕಾಲೇಜು, ಬೆಳವಣಕಿ) ಹಾಗೂ ಜಿಲ್ಲಾ ಸಂಚಾಲಕರಾಗಿ ಎಸ್.ಎಸ್. ತೋಗುಣಸಿ (ಶ್ರೀ ಗುರು ಮಹಾಂತೇಶ ಪದವಿ ಪೂರ್ವ ಕಾಲೇಜು, ಸೂಡಿ) ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನೂತನ ತಂಡವು ಉಪನ್ಯಾಸಕರ ಹಿತಾಸಕ್ತಿ ರಕ್ಷಣೆ, ಶೈಕ್ಷಣಿಕ ಗುಣಮಟ್ಟ ವೃದ್ಧಿ ಹಾಗೂ ಶಿಕ್ಷಣ ಕ್ಷೇತ್ರದ ಸಮಸ್ಯೆಗಳ ಪರಿಹಾರಕ್ಕೆ ಹೆಚ್ಚಿನ ಒತ್ತು ನೀಡಲಿದೆ ಎಂಬ ವಿಶ್ವಾಸವನ್ನು ಸದಸ್ಯರು ವ್ಯಕ್ತಪಡಿಸಿದ್ದಾರೆ.

ಅವಿರೋಧವಾಗಿ ಆಯ್ಕೆಯಾದ ಎಲ್ಲ ಪದಾಧಿಕಾರಿಗಳಿಗೆ ವಿವಿಧ ಶಿಕ್ಷಕರ ಸಂಘಟನೆಗಳು, ಶಿಕ್ಷಣ ತಜ್ಞರು ಹಾಗೂ ಉಪನ್ಯಾಸಕರು ಅಭಿನಂದನೆ ಸಲ್ಲಿಸಿ ಶುಭ ಹಾರೈಸಿದ್ದಾರೆ.

> “ಉಪನ್ಯಾಸಕರ ಹಿತಾಸಕ್ತಿ ಮತ್ತು ಶಿಕ್ಷಣದ ಗುಣಮಟ್ಟ ವೃದ್ಧಿಗೆ ಸಂಘದ ಮೂಲಕ ಇನ್ನಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲಾಗುವುದು.”
>
> **– ಎಸ್.ಎಸ್. ಸೋಮಣ್ಣವರ, ಜಿಲ್ಲಾ ಅಧ್ಯಕ್ಷರು**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka